ಸಂಪುಟ : 9 ಸಂಚಿಕೆ 261 ಪುಟ : 4 ಬೆಲೆ: 3.00 ಬುಧವಾರ ನವೆಂಬರ್ 27 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 261 Pages : 4 Price : 3.00 Wednesday November 27 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ನವೆಂಬರ್ 27 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ 18, 24, 31 – ರಂಗನವಾಡ, ಜಗಳಗಲ್ಲಿ, ದೇಶಪಾಂಡೆರವರ ಲೈನ್, ಜಿಗಜಿಗಣಿರವರ ಲೈನ್, ಮಾಬುಸುಬಾನಿ ಕಟ್ಟಿ, 2 ನಂಬರ ಶಾಲೆ ಹಿಂದಿನ ಭಾಗ ಉಳಿದ ಕೆಲವು ಭಾಗಗಳು. ವಾರ್ಡ್ ನಂ 22 – ಗಂಗಿಮಡಿ, ಅಪಾರ್ಟ್ಮೆಂಟ್ ಭಾಗ– 1,2. ವಾರ್ಡ್ ನಂ. 11 – ನಿಸರ್ಗ ಬಡಾವಣೆ, ಅಬ್ದುಲ್ ಕಲಾಂ ರಸ್ತೆ, ನಾಗಮ್ಮನ ಗುಡಿ, 4ನೇ ಕ್ರಾಸ್, 1ನೇ ಕ್ರಾಸ್, ಹನುಮಂತ ದೇವರು ಗುಡಿ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 8, 9, 10 – ಹೆಲ್ತ್ ಕ್ಯಾಂಪ್, ಶಿರಹಟ್ಟಿ ಓಣಿ, ಕಬಾಡಿ ರಸ್ತೆ, ತೆಂಗಿನಕಾಯಿ ಬಜಾರ್, ಬಸವೇಶ್ವರ ಗುಡಿ, ತೆಗ್ಗಿನ ಪೇಟೆ, ಕುರಹಟ್ಟಿ ಪೇಟೆ ಉಳಿದ ಕೆಲವು ಭಾಗಗಳು. ವಾರ್ಡ್ ನಂ 1 – ಎಸ್ ಎಂ ಕೃಷ್ಣ ನಗರದ ಪೂರ್ತಿ ಭಾಗಗಳು.

## ನಾಳೆ ಬಜೆಟ್ ಸಮಾಲೋಚನಾ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರಸಭೆಯ 2025-26ನೇ ಸಾಲಿನ ಆಯವ್ಯಯ ತಯಾರಿಸಲು ಸರ್ಕಾರದ ಸುತ್ತೋಲೆ ಮಾರ್ಗಸೂಚಿಗಳ ಪ್ರಕಾರ ಸ್ಥಳೀಯ ಸಂಘ ಸಂಸ್ಥೆಗಳ, ಗಣ್ಯ ನಾಗರಿಕರ ಹಾಗೂ ಸ್ವಯಂ ಸೇವಾ ಸಂಸ್ಥೆಗಳ, ವಾಣಿಜ್ಯೋದ್ಯಮ ನಿಗಮಗಳ ಪದಾಧಿಕಾರಿಗಳೊಂದಿಗೆ ಸಮಾಲೋಚಿಸಿ ಸಲಹೆ ಸೂಚನೆಗಳನ್ನು ಪಡೆದು ಆಯವ್ಯಯ ತಯಾರಿಸಿ ಮಂಡಿಸಬೇಕಾಗಿದೆ. ಈ ಕುರಿತು ಆಯವ್ಯಯದ ಮೇಲಿನ ಮೊದಲನೇಯ ಸುತ್ತಿನ ಸಾರ್ವಜನಿಕ ಸಮಾಲೋಚನಾ ಸಭೆಯನ್ನು ನವೆಂಬರ್ 28 ರಂದು ಬೆ 11 ಗಂಟೆಗೆ ನಗರಸಭೆ ಆಡಳಿತಾಧಿಕಾರಿಗಳಾದ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಗರಸಭಾ ಭವನದಲ್ಲಿ ಕರೆಯಲಾಗಿದೆ ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರೊ. ಮಲ್ಲಿಕಾರ್ಜುನರಿಗೆ ಪಿಎಚ್‌ಡಿ ಪುರಸ್ಕಾರ

■ವಿಜಯಸಾಕ್ಷಿ ಸುದ್ದಿ, ಗದಗ



ನಗರದ ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನ ಪ್ರಾಧ್ಯಾಪಕ ಪ್ರೊ. ಮಲ್ಲಿಕಾರ್ಜುನ ಜಿ.ಡಿ ಅವರು ಪಿ.ಎಚ್.ಡಿ ಪದವಿಯನ್ನು ಪಡೆದುಕೊಂಡಿದ್ದಾರೆ.

ಇವರು ತುಮಕೂರಿನ ಶ್ರೀ ಸಿದ್ದಾರ್ಥ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿದ 'ಅನಾಲಿಸಿಸ್ ಆಫ್ ಪವರ್ ಕ್ವಾಲಿಟಿ ಫಾರ್ ಗ್ರಿಡ್ ಕನೆಕ್ಟೆಡ್ ಸೋಲಾರ್ ಪಿ.ವಿ. ಸಿಸ್ಟಮ್' ಮಹಾಪ್ರಬಂಧಕ್ಕೆ ಡಾ. ಶೇಷಾದ್ರಿ ಜಿ.ಎಸ್. ಅವರು ಮಾರ್ಗದರ್ಶಕರಾಗಿದ್ದರು.

ಇವರ ಸಾಧನೆಗೆ ಪ್ರಾಂಶುಪಾಲರಾದ ಡಾ. ಎಂ.ಎಂ. ಅವಟಿ, ಇಲೆಕ್ಟ್ರಿಕಲ್ ವಿಭಾಗದ ಮುಖ್ಯಸ್ಥರಾದ ಡಾ. ಈರಣ್ಣ ಕೋರಚಗಾಂವ್, ಕಾಲೇಜಿನ ಆಡಳಿತ ಮಂಡಳಿ ಮತ್ತು ಸಿಬ್ಬಂದಿ ವರ್ಗದವರು ಪ್ರೊ. ಮಲ್ಲಿಕಾರ್ಜುನ ಜಿ.ಡಿ ಅವರ ' ಈ ಸಾಧನೆಗೆ ಶುಭ ಹಾರೈಸಿದ್ದಾರೆ.

### ಜಿಲ್ಲಾ ಮಟ್ಟದ ಗಣಿತ ವಿಚಾರ ಸಂಕಿರಣ, ಸನ್ಮಾನ ಕಾರ್ಯಕ್ರಮದಲ್ಲಿ ಜಿ.ಪಂ ಸಿಇಓ ಭರತ್ ಎಸ್

# ಮಕ್ಕಳ ಕಲಿಕಾ ಗುಣಮಟ್ಟ ಸುಧಾರಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗಣಿತ ಕಲಿಕಾ ಆಂದೋಲನದ ಮೂಲಕ ಗ್ರಾಮ ಮಟ್ಟದ ವಿದ್ಯಾರ್ಥಿಗಳ ಕಲಿಕಾ ಗುಣಮಟ್ಟವನ್ನು ಸುಧಾರಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಹೇಳಿದರು.

ನಗರದ ಜಿ.ಪಂ ಸಭಾಂಗಣದಲ್ಲಿ ಮಂಗಳವಾರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಅಕ್ಷರ ಫೌಂಡೇಶನ್ ಇವುಗಳ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಗಣಿತ ವಿಚಾರ ಸಂಕಿರಣ ಮತ್ತು ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಲಕ್ಕುಂಡಿ ಗ್ರಾಮ ಪಂಚಾಯತಿ ಅಧ್ಯಕ್ಷ ಕೆಂಚಪ್ಪ ಎಸ್.ಪೂಜಾರ್ ಮಾತನಾಡಿ, ಗಣಿತ ಕಲಿಕಾ ಆಂದೋಲನ ಮತ್ತು ಗಣಿತ ಸ್ಪರ್ಧೆಗಳ ಬಗ್ಗೆ ಮುಂಚಿತವಾಗಿ ಸಮಯ ನಿಗದಿ ಮಾಡಬೇಕು. ಅಂದಾಗ ಸ್ವಯಂ ಸೇವಕರ ನಿಯೋಜನೆ ಸೇರಿದಂತೆ ಉಳಿದ ಕಾರ್ಯಗಳನ್ನು ನಿರ್ವಹಿಸಲು ಸಿದ್ಧತೆ ಮಾಡಿಕೊಳ್ಳುತ್ತೇವೆ. ಈಗಾಗಲೇ ಗ್ರಾಮ ಪಂಚಾಯಿತಿ ಮಟ್ಟದ ಶಾಲೆಗಳಲ್ಲಿ ಶಿಕ್ಷಕರು ಉತ್ತಮವಾಗಿ ಬೋಧಿಸುತ್ತಿದ್ದಾರೆ. ಕ್ಷೇತ್ರ ಶಿಕ್ಷಣಾಧಿಕಾರಿಗಳು ವಿಶೇಷ ಗಮನಹರಿಸಿ ಶಾಲೆಗಳಿಗೆ ಭೇಟಿ ನೀಡಿದಲ್ಲಿ ಶಾಲೆಗಳಲ್ಲಿ ಶಿಕ್ಷಕರು ಮನೋಬಲದಿಂದ ಬೋಧಿಸುತ್ತಾರೆ ಎಂದು ಹೇಳಿದರು.




ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್. ಎಸ್. ಬುರಡಿ ಮಾತನಾಡಿ, ಶಾಲೆಗಳಿಗೆ ಮೊದಲು ವಿದ್ಯಾರ್ಥಿಗಳು ದಾಖಲಾಗಬೇಕು. ದಾಖಲಾದ ಮಗು ನಿಯಮಿತವಾಗಿ ಶಾಲೆಗೆ ಬರುವಂತೆ ನೋಡಿಕೊಳ್ಳಬೇಕು. ನಂತರ ಮಕ್ಕಳಿಗೆ ಗುಣಮಟ್ಟದ ಕಲಿಕೆಯಾಗಬೇಕು. ಗಣಿತ ಕಲಿಕಾ ಆಂದೋಲನವನ್ನು ಪ್ರತಿ ವರ್ಷ ಆಯೋಜಿಸಿ ಗಣಿತ ಸ್ಪರ್ಧೆ, ಕಾರ್ಯಾಗಾರ ಕೈಗೊಳ್ಳಲಾಗಿದೆ. ಗ್ರಾ.ಪಂ ಮಟ್ಟದ ಶಾಲೆಗಳಲ್ಲಿ ಅಕ್ಷರ ಫೌಂಡೇಶನ್ ನೀಡಿದ ಗಣಿತ ಕಿಟ್‌ಗಳನ್ನು ಬಳಸಿಕೊಂಡು ಮಕ್ಕಳಿಗೆ ಗಣಿತದ ಸಮಗ್ರ ಮಾಹಿತಿಯನ್ನು ಕಲಿಸಬಹುದು ಎಂದರು.

ಇದೇ ಸಂದರ್ಭದಲ್ಲಿ ಉತ್ತಮ ಫಲಿತಾಂಶವನ್ನು ಪಡೆದ 25 ಶಾಲೆಗಳು ಮತ್ತು 25 ಗ್ರಾಮ ಪಂಚಾಯಿತಿಗಳನ್ನು ಅಭಿನಂದಿಸಿ, ಗಣಿತ ಸ್ಪರ್ಧೆಗಳ ಗದಗ ಜಿಲ್ಲೆಯ ವರದಿಯನ್ನು ಬಿಡುಗಡೆಗೊಳಿಸಿದರು.

ಗ್ರಾಮ ಪಂಚಾಯಿತಿ ಮಟ್ಟದ ಗಣಿತ ಸ್ಪರ್ಧೆಗಳ ಜಿಲ್ಲೆಯ ವರದಿಯಲ್ಲಿ ಕಡಿಮೆ ಸ್ಥಾನವನ್ನು ಪಡೆದುಕೊಂಡ ತಾಲೂಕುಗಳು ಮುಂದಿನ ದಿನಗಳಲ್ಲಿ ಪ್ರಾಮಾಣಿಕ ಪ್ರಯತ್ನದಿಂದ ಅಕ್ಷರ ಫೌಂಡೇಷನ್ ನೀಡಿದ ಗಣಿತ ಉಪಕರಣಗಳ ಕಿಟ್‌ಗಳನ್ನು ಬಳಸಿಕೊಂಡು ಪರಿಣಾಮಕಾರಿಯಾಗಿ ಮಕ್ಕಳಿಗೆ ಗಣಿತವನ್ನು ಬೋಧಿಸಿ ಮಕ್ಕಳ ಕಲಿಕಾ ಗುಣಮಟ್ಟವನ್ನು ಸುಧಾರಿಸಬೇಕು ಎಂದು ಭರತ್ ಎಸ್ ಸೂಚಿಸಿದರು.

ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆ (ಅಭಿವೃದ್ಧಿ) ಉಪನಿರ್ದೇಶಕ ಜಿ.ಎಲ್. ಬಾರಾಟಕ್ಕೆ, ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ, ಅಕ್ಷರ ಫೌಂಡೇಶನ್ ವಿಭಾಗೀಯ ವ್ಯವಸ್ಥಾಪಕರಾದ ಅಂಜಲೀನಾ ಗ್ರೇಗರಿ, ಪಂಚಾಯತ್ ರಾಜ್ ಇಲಾಖೆ ಸಹಾಯಕ ನಿರ್ದೇಶಕ ಅಶ್ವಿನಿ ಕುರಡಗಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ವಿ.ಎಂ. ಹಿರೇಮಠ, ಎ.ಎನ್. ನಾಗರಳ್ಳಿ, ಮಾರುತಿ ಮಲ್ಲಾಪುರ ಸೇರಿದಂತೆ ಶಿಕ್ಷಣ ಇಲಾಖೆ ಅಧಿಕಾರಿಗಳು, ಪಿಡಿಓಗಳು, ಶಾಲಾ ಶಿಕ್ಷಕರು ಹಾಜರಿದ್ದರು.

### ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಗೋವಿಂದರೆಡ್ಡಿ

# ಸಂವಿಧಾನದಿಂದ ನೆಮ್ಮದಿಯ ಬದುಕು

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತವು ಅತ್ಯಂತ ಶ್ರೇಷ್ಠ ಸಂವಿಧಾನ ಹೊಂದಿದ ರಾಷ್ಟ್ರವಾಗಿದೆ. ದೇಶದ ಕಟ್ಟಕಡೆಯ ವ್ಯಕ್ತಿಗೂ ನೆಮ್ಮದಿಯ ಬದುಕು ನೀಡಲು ಸಂವಿಧಾನದಿಂದ ಸಾಧ್ಯವಾಗಿದೆ ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದರು.

ಸಂವಿಧಾನ ದಿನಾಚರಣೆಯ ಅಂಗವಾಗಿ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಮಂಗಳವಾರ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರು ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ಗೌರವ ನಮನ ಸಲ್ಲಿಸಿ ಮಾತನಾಡಿದರು.

ದೇಶದ ಸಂವಿಧಾನದ ಪೀಠಿಕೆಯಲ್ಲಿ ನಮ್ಮ ದೇಶದ ಪ್ರಜಾಪ್ರಭುತ್ವದ ಹಿರಿಮೆ, ಶಕ್ತಿ ಹಾಗೂ ಅದರ ಶ್ರೇಷ್ಠ ಗುಣಗಳು ಅಡಗಿವೆ. ಸರ್ವಧರ್ಮಗಳಿಗೂ ಸಮಭಾವ ಎಂಬ ಸದಾಶಯ ಸಂವಿದಾನದ ಮುಖ್ಯ ಧ್ಯೇಯವಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.



ಇದೇ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ ಅವರು, ಭಾರತವನ್ನು ಒಂದು ಸಾರ್ವಭೌಮ, ಸಮಾಜವಾದಿ, ಸರ್ವಧರ್ಮ ಸಮಭಾವದ ಪ್ರಜಾಸತ್ತಾತ್ಮಕ ಗಣರಾಜ್ಯವಾಗಿ ರಚಿಸಲು ಮತ್ತು ಸಮಸ್ತ ನಾಗರಿಕರಿಗೆ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯ, ವಿಚಾರ, ಅಭಿವ್ಯಕ್ತಿ, ವಿಶ್ವಾಸ, ಧರ್ಮಶ್ರದ್ಧೆ ಮತ್ತು ಉಪಾಸನಾ ಸ್ವಾತಂತ್ರ್ಯ-ಸ್ಥಾನಮಾನ ಹಾಗೂ ಅವಕಾಶ ಸಮಾನತೆ ದೊರೆಯುವಂತೆ ಮಾಡಲು ಮತ್ತು ವ್ಯಕ್ತಿ ಗೌರವವನ್ನು ರಾಷ್ಟ್ರದ ಏಕತೆಯನ್ನು ಮತ್ತು ಅಖಂಡತೆಯನ್ನು ಸುನಿಶ್ಚಿತಗೊಳಿಸಿ ಭ್ರಾತೃಭಾವನೆಯನ್ನು ವೃದ್ಧಿಗೊಳಿಸಲು ಶ್ರದ್ಧಾಪೂರ್ವ ಸಂಕಲ್ಪ ಮಾಡುವ ಕುರಿತು ಸಂವಿಧಾನದ ಪೀಠಿಕೆಯನ್ನು ಓದಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ., ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಮುದಾಯದವರು, ಗಣ್ಯರು, ಸಾರ್ವಜನಿಕರು ಹಾಜರಿದ್ದರು.

## ಟೋಲ್ ಸಂಗ್ರಹಣೆ ರದ್ದುಗೊಳಿಸಲು ಮನವಿ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಗದಗ-ಮುಂಡರಗಿ ತಾಲೂಕುಗಳ ಮಾರ್ಗಮಧ್ಯೆ ಕೇವಲ 60 ಕಿ.ಮೀ. ಅಂತರದಲ್ಲಿ ಪಾಪನಾಶಿ ಟೋಲ್, ಕೊರ್ಲಹಳ್ಳಿ ಟೋಲ್ ಸಂಗ್ರಹಣಾ ಘಟಕಗಳನ್ನು ನಿರ್ಮಿಸಲಾಗಿದ್ದು, ಈ ಟೋಲ್ ಸಂಗ್ರಹಣೆಯಿಂದ ಸಾರ್ವಜನಿಕರಿಗೆ ಅನ್ಯಾಯವಾಗುತ್ತಿದೆ. ಈ ಟೋಲ್ ಸಂಗ್ರಹಣೆಯನ್ನು ಸ್ಥಗಿತಗೊಳಿಸಬೇಕು ಎಂದು ಸ್ಥಳೀಯ ವಾಹನ ಮಾಲೀಕರ ಮತ್ತು ಚಾಲಕರ ಪರವಾಗಿ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಲಾರಿ ಚಾಲಕರ ಮಾಲೀಕರ ಸಂಘ ಹೊಸ ಡಂಬಳ ವತಿಯಿಂದ ಶಾಸಕ ಜಿ.ಎಸ್. ಪಾಟೀಲರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.



ಈ ಟೋಲ್ ಸಂಗ್ರಹಣೆ ಲಾರಿ ಮಾಲೀಕರಿಗೆ, ಸಾರ್ವಜನಿಕರಿಗೆ ಹೊರೆಯಾಗುತ್ತಿದೆ. ಈಗಾಗಲೇ ವಾಹನ ಮಾಲೀಕರು ರಾಜ್ಯ ಸರ್ಕಾರಕ್ಕೆ ಸಾಕಷ್ಟು ತೆರಿಗೆಗಳನ್ನು ನೀಡುತ್ತಿದ್ದಾರೆ. ವಾಹನಗಳ ಖರ್ಚುಗಳನ್ನು ನಿಭಾಯಿಸುವುದೇ ಕಷ್ಟಕರವಾಗಿದೆ. ಈ ಎರಡು ಟೋಲ್ ಸಂಗ್ರಹಣೆಯಿಂದ ಬಸ್ ದರಗಳಲ್ಲಿ ಹೆಚ್ಚಿಗೆ ಮಾಡಲಾಗಿದ್ದು ಇದು ಸಹ ಸಾರ್ವಜನಿಕರಿಗೆ ಹೊರೆಯಾಗಿದೆ. ಪಾಪನಾಶಿ ಮತ್ತು ಕೊರ್ಲಹಳ್ಳಿ ಟೋಲ್ ಸಂಗ್ರಹಣೆ ಮಾಡುವುದನ್ನು ತಕ್ಷಣ ರದ್ದುಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲು ವಿನಂತಿಸಿದರು.

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಎಚ್.ಡಿ. ದೊಡ್ಡಮನಿ, ಹುಚ್ಚುಸಾಬ ಅಮರಾವತಿ ಸೇರಿದಂತೆ ಸ್ಥಳೀಯ ಲಾರಿ ಮಾಲಕರು ಮತ್ತು ಚಾಲಕರು, ಸಂಘದ ಸದಸ್ಯರು ಉಪಸ್ಥಿತರಿದ್ದರು.

## ಸಂವಿಧಾನದ ಅರಿವಿನಿಂದ ರಾಷ್ಟ್ರಭಕ್ತಿ ಇಮ್ಮಡಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿಶ್ವಮಾನ್ಯ ಸಂವಿಧಾನವು ಪ್ರತಿಯೊಬ್ಬರ ಸುಂದರ ಬದು-ಕಿಗೆ, ನ್ಯಾಯಯುತ, ನೆಮ್ಮದಿಯ ಜೀವನದ ಹೆಜ್ಜೆಗೆ ಅಗತ್ಯವಾಗಿದೆ ಎಂದು ಬಿಸಿಎನ್ ಶಿಕ್ಷಣ ಸಂಸ್ಥೆಯ ನಿರ್ದೇಶಕ ನಾಗರಾಜ ಕುಲಕರ್ಣಿ ಹೇಳಿದರು.

ಪಟ್ಟಣದ ಬಿಸಿಎನ್ ಪಿಯು ಮತ್ತು ಪದವಿ ಕಾಲೇಜಿನಲ್ಲಿ ಮಂಗಳವಾರ ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಂವಿಧಾನದ ಬಗ್ಗೆ ಎಲ್ಲರಲ್ಲೂ ನಂಬಿಕೆ, ವಿಶ್ವಾಸ, ಹೆಮ್ಮೆ, ಗೌರವ, ಪ್ರೀತಿ ಇರಬೇಕು. ಸಂವಿಧಾನದ ತಿಳಿವಳಿಕೆ ವಿದ್ಯಾವಂತರಿಗಷ್ಟೇ ಅಲ್ಲದೇ ರೈತರು, ಜನಸಾಮಾನ್ಯರಿಗೂ ಅಗತ್ಯ. ಸಂವಿಧಾನ ಅರಿವಿದ್ದರೆ ನಮ್ಮ ಹಕ್ಕು-ಕರ್ತವ್ಯಗಳನ್ನು ಪಾಲಿಸುತ್ತೇವೆ. ಆಗ




ಕಾನೂನು ವ್ಯವಸ್ಥೆ ಸುಲಲಿತವಾಗಿ ಸಾಗುತ್ತದೆ. ಸಂವಿಧಾನದ ಅರಿವು ರಾಷ್ಟ್ರಭಕ್ತಿ ಇಮ್ಮಡಿಗೊಳಿಸುತ್ತದೆ. ಇಂತಹ ಶ್ರೇಷ್ಠ ರಾಷ್ಟ್ರಗ್ರಂಥ ನೀಡಿದ ಮಹಾನ್ ಚೇತನ ಡಾ. ಬಿ.ಆರ್. ಅಂಬೇಡ್ಕರ್ ನಮ್ಮ ದೇಶದ ಹೆಮ್ಮೆಯಾಗಿದ್ದಾರೆ ಎಂದ ಅವರು, ಆಯಾ ಕಾಲಘಟ್ಟದಲ್ಲಿ ಆಗಾಗ್ಗೆ ಸಂವಿಧಾನ ತಿದ್ದುಪಡಿಯಾದ ಬಗ್ಗೆ ತಿಳಿಸಿದರು.

ಕಾಲೇಜಿನ ಪ್ರಾಚಾರ್ಯ ಡಿ.ಎಸ್. ಪ್ಯಾಟಿ ಅಧ್ಯಕ್ಷತೆ ವಹಿಸಿದ್ದರು. ಎಸ್. ಯಳವತ್ತಿ, ಪ್ರೇಮಾ ಜಿ, ರೋಹಿತ್ ಯಲವಗಿ, ವಿದ್ಯಾರ್ಥಿಗಳು ಭಾಗವಹಿಸಿದ್ದರು. ರಾಜೀವ ಕುರಿ ನಿರ್ವಹಿಸಿದರು.

## ಸರಕಾರಿ ಕಾಲೇಜಿನಲ್ಲಿ ಸ್ವಾಗತ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಇಲ್ಲಿನ ಶ್ರೀ ಜ.ಫಕೀರೇಶ್ವರ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 2024-25ನೇ ಸಾಲಿನ ಕ್ರೀಡೆ, ಸಾಂಸ್ಕೃತಿಕ, ಎನ್‌ಎಸ್‌ಎಸ್, ಸ್ಕೌಟ್ಸ್ ಮತ್ತು ಗೈಡ್ಸ್, ರೆಡ್‌ಕ್ರಾಸ್ ಚಟುವಟಿಕೆಗಳ ಉದ್ಘಾಟನೆ ಹಾಗೂ ಬಿಎ ಮತ್ತು ಬಿಕಾಂ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ನಡೆದ ಸ್ವಾಗತ ಸಮಾರಂಭದ ಕಾರ್ಯಕ್ರಮವನ್ನು ಶಾಸಕ ಡಾ. ಚಂದ್ರು ಲಮಾಣಿ ಉದ್ಘಾಟಿಸಿದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ತಹಸೀಲ್ದಾರ ಅನಿಲ ಬಡಿಗೇರ, ಬಾಹುಬಲಿ ಜೈನರ ಹಾಗೂ ಕಾಲೇಜಿನ ಪ್ರಾಂಶುಪಾಲ ಡಾ. ಉಮೇಶ ಅರಹುಣಸಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಚ್.ಡಿ. ಮಾಗಡಿ, ಕಾಂಗ್ರೆಸ್ ಮುಖಂಡ ಡಿ.ಕೆ. ಹೊನ್ನಪ್ಪನವರ ಮಾತನಾಡಿದರು.

ಚಂದ್ರಕಾಂತ ನೂರಶೆಟ್ಟರ, ಅಜ್ಜು ಪಾಟೀಲ, ಡಾ. ಸುನೀಲ ಬುರಬುರೆ, ಡಾ. ಪವನ ಫಾಯದೆ, ಜಾನು ಲಮಾಣಿ, ಫಕ್ಕೀರೇಶ ರಟ್ಟಿಹಳ್ಳಿ, ನಂದಾ ಪಲ್ಲೇದ, ಕೆ.ಎ. ಬಳಿಗೇರ, ಅಶೋಕ ವರವಿ, ಗೂಳಪ್ಪ ಕರಿಗಾರ, ಗೀತಾ ಹಲಸೂರ, ನಂದಾ ಕಪ್ಪತ್ತನವರ, ಎಚ್.ಎಂ. ದೇವಗಿರಿ ಮುಂತಾದವರು ಉಪಸ್ಥಿತರಿದ್ದರು.

## ಸಂಪಾದಕೀಯ

# ಸರ್ವರಿಗೂ ಸ್ವಾಭಿಮಾನದಿಂದ ಬದುಕುವ ಅವಕಾಶ ಕಲ್ಪಿಸಿದ್ದ ನಮ್ಮ ಸಂವಿಧಾನ

ಸಂವಿಧಾನ ದಿನಾಚರಣೆಯ ಈ ಸುಸಂದರ್ಭದಲ್ಲಿ ಸಂವಿಧಾನದ ಪ್ರಸ್ತಾವನೆಗೆ ಜಾತ್ಯಾತೀತ, ಸಮಾಜವಾದಿ ಪದಗಳನ್ನು ಸೇರಿಸಿದ ಕುರಿತು ದಾಖಲಾಗಿದ್ದ ಪ್ರಕರಣವನ್ನು ಸುಪ್ರೀಂಕೋರ್ಟ್ ವಜಾಗೊಳಿಸಿದೆ. ಆ ಮೂಲಕ ಸಂವಿಧಾನದ ಪ್ರಸ್ತಾವನೆಗೆ ಮಾಡಲಾದ ತಿದ್ದುಪಡಿ ನ್ಯಾಯಸಮ್ಮತವಾಗಿದೆ ಎನ್ನುವ ಅಭಿಪ್ರಾಯವನ್ನು ವ್ಯಕ್ತಪಡಿಸಿರುವುದು, ಪ್ರಜಾಪ್ರಭುತ್ವದಲ್ಲಿ ನಂಬಿಕೆ ಉಳ್ಳವರ ಸಂಭ್ರಮಕ್ಕೆ ಕಾರಣವಾಗಿದೆ.

ಆದರೆ ಮತ್ತೊಂದೆಡೆ ಪೇಜಾವರ ಶ್ರೀಗಳು ಸಂವಿಧಾನದ ಕುರಿತು ನೀಡಿರುವ ಹೇಳಿಕೆ, ರಾಜ್ಯಪಾಲರಿಗೆ ಸಲ್ಲಿಸಿದ್ದಾರೆ ಎನ್ನುವ ಮನವಿ ಆಘಾತ ತಂದಿದೆ. ಲಕ್ಷಾಂತರ ಜನರ ತ್ಯಾಗ, ಬಲಿದಾನದಿಂದ ಪಡೆದ ಸ್ವಾತಂತ್ರ್ಯವನ್ನು ಸಂವಿಧಾನ ರಕ್ಷಣೆ ಮಾಡಿದೆ. ಸರ್ವರಿಗೂ ಸ್ವಾಭಿಮಾನದಿಂದ ಬದುಕುವ ಅವಕಾಶವನ್ನು ಡಾ. ಅಂಬೇಡ್ಕರ್ ಅವರು ಬರೆದ ಸಂವಿಧಾನ ನಮಗೆ ನೀಡಿದೆ. ಆದರೂ ನಮ್ಮನ್ನು ಗೌರವಿಸುವ ಸಂವಿಧಾನ ಬೇಕು ಎಂದು ಪೇಜಾವರ ಶ್ರೀಗಳು ಹೇಳಿಕೆ ನೀಡಿದ್ದಾರೆ.

ಸಂವಿಧಾನ ದೇಶದ ಪ್ರತಿಯೊಬ್ಬ ನಾಗರಿಕನಿಗೂ ಸ್ವಾಭಿಮಾನದಿಂದ ಬದುಕುವ ಅವಕಾಶ ನೀಡಿದೆ. ಅದರಲ್ಲಿ ಪೇಜಾವರ ಶ್ರೀಗಳೂ ಸೇರಿದ್ದಾರೆ. ಆದರೂ ನಮ್ಮನ್ನು ಗೌರವಿಸುವ ಸಂವಿಧಾನ ಬೇಕು ಎನ್ನುವ ಅವರ ಮಾತು ಪ್ರಜಾಪ್ರಭುತ್ವ ಆಶಯಕ್ಕೆ ವಿರುದ್ಧವಾಗಿದೆ. ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ನಾವು ಸ್ವಾತಂತ್ರ್ಯ ಹೊಂದಿದ್ದೇವೆ ಎಂದು ಶ್ರೀಗಳು ಪ್ರಶ್ನಿಸುತ್ತಾರೆ. ಇಂಥ ಪ್ರಶ್ನಿಸುವ ಸ್ವಾತಂತ್ರ್ಯವನ್ನೂ ಸಂವಿಧಾನವೇ ಕೊಟ್ಟಿದೆ ಎನ್ನುವುದನ್ನು ಶ್ರೀಗಳು ಮರೆಯಬಾರದು.

ಇನ್ನು ಸನಾತನ ಮಂಡಳಿ ರಚಿಸುವಂತೆ ಪೇಜಾವರ ಶ್ರೀಗಳು ಹೇಳಿದ್ದಾರೆ, ಸನಾತನ ಧರ್ಮ ದಲಿತರು, ಅಸ್ಪೃಶ್ಯರನ್ನು ಎಷ್ಟರ ಮಟ್ಟಿಗೆ ಒಪ್ಪಿಕೊಳ್ಳುತ್ತದೆ ಎನ್ನುವ ಬಗ್ಗೆ ಅವರೇ ಸ್ಪಷ್ಟಪಡಿಸಲಿ. ಅದಾದ ನಂತರ ಅವರಿಗೆ ಯಾವ ರೀತಿ ಸಂವಿಧಾನ ಬೇಕು, ಆ ರೀತಿಯ ಸಂವಿಧಾನ ರಚನೆಗೂ ಮುಂದಾಗಲಿ. ಒಂದೊಮ್ಮೆ ಅವರು ಬರೆದ ಸಂವಿಧಾನ ಒಪ್ಪಿತವಾದರೆ, ಅದನ್ನು ಒಪ್ಪಿಕೊಳ್ಳುವ ಅವಕಾಶವೂ ಅಂಬೇಡ್ಕರ್ ಅವರ ಸಂವಿಧಾನದಿಂದಲೇ ಆಗಬೇಕು ಎನ್ನುವುದು ಅರ್ಥವಾದರೆ ಸಾಕು.

**ಸಂವಿಧಾನ ದಿನಾಚರಣೆ, ಕಾನೂನು ಅರಿವು-ನೆರವು ಕಾರ್ಯಕ್ರಮದಲ್ಲಿ ದಿವಾಣಿ ನ್ಯಾಯಾಧೀಶ ಆದಿತ್ಯ ಬಿ.ಕಲಾಲ**

# ಭಾರತದ ಸಂವಿಧಾನ ಸೃಜನಶೀಲವಾಗಿದೆ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಭಾರತ ಸಂವಿಧಾನ ಜನರನ್ನು ಸಶಕ್ತಗೊಳಿಸಿ, ಸರ್ವರಿಗೂ ಸಮಾನತೆ ಒದಗಿಸಿದೆ. ಪ್ರಜಾಪ್ರಭುತ್ವ ಆಧಾರದ ಮೇಲೆ ಲಿಖಿತ ರೂಪದಲ್ಲಿ ರಚನೆಗೊಂಡು, ಭಾರತೀಯರ ಬದುಕಿಗೆ ಹತ್ತಿರವಾಗಿರುವ ಭಾರತದ ಸಂವಿಧಾನ ಸೃಜನಶೀಲ ಮತ್ತು ಚಲನಶೀಲವಾಗಿದೆ ಎಂದು ರೋಣ-ಗಜೇಂದ್ರಗಡ ತಾಲೂಕು ಪ್ರಧಾನ ದಿವಾಣಿ ನ್ಯಾಯಾಧೀಶ ಆದಿತ್ಯ ಬಿ.ಕಲಾಲ ಹೇಳಿದರು.

ತಾಲೂಕು ಕಾನೂನು ಸೇವೆಗಳ ಸಮಿತಿ, ನ್ಯಾಯವಾದಿಗಳ ಸಂಘದಿಂದ ಸಂವಿಧಾನ ದಿನಾಚರಣೆಯ ಅಂಗವಾಗಿ ನಗರದ ಶ್ರೀ ಅನ್ನದಾನೇಶ್ವರ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಮಂಗಳವಾರ ಜರುಗಿದ ಕಾನೂನು ಅರಿವು-ನೆರವು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಭಾರತದ ಸಂವಿಧಾನ ವಿಶ್ವದಲ್ಲಿಯೇ ಅತ್ಯುನ್ನತವಾಗಿದೆ. ದೇಶದ ಸಾರ್ವಭೌಮತೆ, ಪ್ರಜೆಗಳ ಹಕ್ಕುಗಳ ರಕ್ಷಣೆ ಸಂವಿಧಾನದಿಂದ ಮಾತ್ರ ಸಾಧ್ಯ. ಸಂವಿಧಾನ ಜನರ ಜೀವನಾಡಿಯಾಗಿದ್ದು, ಪ್ರತಿಯೊಬ್ಬ ಭಾರತೀಯನೂ ಸಂವಿಧಾನವನ್ನು ಗೌರವಿಸಬೇಕು.

ಅಮಾಯಕರಿಗೆ ಶಿಕ್ಷೆಗೆ ಆಗಬಾರದು, ತಪ್ಪಿತಸ್ಥರಿಗೆ ಶಿಕ್ಷೆಯಾಗಬೇಕು. ನೊಂದವರಿಗೆ, ಅಬಲೆಯರಿಗೆ, ದೀನ-ದಲಿತರಿಗೆ, ಅಮಾಯಕರಿಗೆ ಪರಿಹಾರ



ಒದಗಿಸುವುದೇ ಕಾನೂನಿನ ಮುಖ್ಯ ಉದ್ದೇಶವಾಗಿದೆ. ಕಾನೂನು ಸೌಲಭ್ಯಗಳನ್ನು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಿಸಬೇಕಾದ ಮಹತ್ತರ ಉದ್ದೇಶವಾಗಿದ್ದು, ಒಂದು ರಾಷ್ಟ್ರ ಅಭಿವೃದ್ಧಿ ಹೊಂದಬೇಕಾದರೆ ಆ ರಾಷ್ಟ್ರದಲ್ಲಿ ಕಾನೂನು ಸುವ್ಯವಸ್ಥೆ ಪ್ರಮುಖ ಪಾತ್ರ ವಹಿಸುತ್ತದೆ. ಕಾನೂನು ಸಾಕ್ಷರತೆಯು ಬರೀ ಸಾಕ್ಷರತೆಯಾಗದೇ ಸಾರ್ವಜನಿಕರು ಯಾವುದು ತಪ್ಪು ಯಾವುದು ಸರಿ ಎಂದು ತಿಳುವಳಿಕೆ ಹೊಂದುವಂತಾಗಬೇಕು ಎಂದರು.

ಪಿಯು ಕಾಲೇಜಿನ ಪ್ರಾಂಶುಪಾಲ ವಸಂತರಾವ್ ಗಾರಗಿ ಮಾತನಾಡಿ, ಡಾ. ಬಿ.ಆರ್. ಅಂಬೇಡ್ಕರ್ ಅವರು 1949ರ ನ.26ರಂದು ದೇಶಕ್ಕೆ ಸಂವಿಧಾನವನ್ನು ಸಮರ್ಪಣೆ ಮಾಡುವ ಮೂಲಕ ಸಮಗ್ರ ಅಭಿವೃದ್ಧಿಗೆ ಕಾರಣೀಭೂತರಾದರು. ಈ ದಿನವನ್ನು ನಾವೆಲ್ಲರೂ ಹಬ್ಬದ ರೀತಿಯಲ್ಲಿ ಆಚರಿಸಬೇಕು. ಸಾರ್ವಭೌಮತ್ವದಿಂದ ಕೂಡಿರುವ ಭಾರತದಲ್ಲಿ ಪ್ರತಿಯೊಬ್ಬ ಸಾಮಾನ್ಯ ಮನುಷ್ಯ ದೇಶದ ಅತ್ಯುನ್ನತ ಹುದ್ದೆ ಪಡೆಯಲು ಅವಕಾಶ ಕಲ್ಪಿಸಿರುವ ಭಾರತದ ಸಂವಿಧಾನದ ಆಸೆ ಮತ್ತು ಜನರ ಆಶೋತ್ತರಗಳನ್ನು ಈಡೇರಿಸುವ ನಿಟ್ಟಿನಲ್ಲಿ ಎಲ್ಲರೂ ಶ್ರಮಿಸಬೇಕಿದೆ ಎಂದರು.

ರೋಣ-ಗಜೇಂದ್ರಗಡ ತಾಲೂಕು ವಕೀಲರ ಸಂಘದ ಅಧ್ಯಕ್ಷ ವಿ.ಎಸ್. ಬಂಗಾರಿ ಮಾತನಾಡಿ, ಎಲ್ಲಾ ಕಾನೂನುಗಳ ತಾಯಿಯಾಗಿರುವ ಸಂವಿಧಾನವನ್ನು ಓದುವುದರ ಜೊತೆಗೆ ಅದರಲ್ಲಿನ ಅಂಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಇದರಿಂದ ದೇಶದಲ್ಲಿನ ಸಮಸ್ಯೆಗಳಿಗೆ ಪರಿಹಾರ ದೊರಕಲು ಸಾಧ್ಯವಾಗುತ್ತದೆ. ಕಾನೂನು ಸೇವೆಗಳು ಇರುವುದು ಸಮಾಜದ, ನಾಗರಿಕರ ಒಳಿತಿಗಾಗಿ. ಅವುಗಳನ್ನು ಪಾಲನೆ ಮಾಡುವುದು ನಮ್ಮೆಲ್ಲರ ಹಿತಕ್ಕಾಗಿ ಎಂದರು.

ಈ ಸಂದರ್ಭದಲ್ಲಿ ತಾಲೂಕು ಪ್ರಧಾನ ದಿವಾಣಿ ನ್ಯಾಯಾಧೀಶ ಆದಿತ್ಯ ಬಿ.ಕಲಾಲ ಸಂವಿಧಾನದ ಪೀಠಿಕೆಯನ್ನು ಓದಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶರಣಪ್ಪ ಕೆ.ರೇವಡಿ ವಹಿಸಿದ್ದರು. ಸಂಸ್ಥೆಯ ಆಡಳಿತಾಧಿಕಾರಿ ಎನ್. ಆರ್. ಗೌಡರ, ವಕೀಲರಾದ ಬಿ.ಎಂ. ಸಜ್ಜನ, ಎ.ಎಸ್. ಅರಹುಣಸಿ, ರಾಜೇಶ್ವರಿ, ಬಾಲು ವಿ.ರಾಠೋಡ, ಸುನಿಲ ಪವಾರ, ಎಸ್.ಬಿ. ಹಿಡಿಮಠ, ಎನ್.ಎಸ್. ಬಸವರೆಡ್ಡಿ ಹಾಗೂ ಕಾಲೇಜಿನ ಸಿಬ್ಬಂದಿಗಳು ಇದ್ದರು.

# ಪ್ಲಾಸ್ಟಿಕ್ ವಸ್ತುಗಳ ನಿಷೇಧ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಅಧಿಸೂಚನೆಯನ್ವಯ ರಾಜ್ಯಾದ್ಯಂತ ಎಲ್ಲ ರೀತಿಯ ಪ್ಲಾಸ್ಟಿಕ್ ಕ್ಯಾರಿಬ್ಯಾಗ್, ಪ್ಲಾಸ್ಟಿಕ್ ಭಿತ್ತಿಪತ್ರ, ಪ್ಲಾಸ್ಟಿಕ್ ಚಮಚಗಳು, ಕ್ಲಿಂಗ್ ಫಿಲ್ಮ್, ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆಗಳು ಮತ್ತು ಥರ್ಮೋಕೋಲ್ ಮತ್ತು ಪ್ಲಾಸ್ಟಿಕ್ ಮೈಕ್ರೋ ಬೀಡ್ಸ್‌ನಿಂದ ತಯಾರಾದ ವಸ್ತುಗಳ ತಯಾರಿಕೆ, ಸರಬರಾಜು ಮತ್ತು ಬಳಕೆಯನ್ನು ನಿಷೇಧಿಸಲಾಗಿದೆ. ಅದರಂತೆ ಮುಳಗುಂದ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ತಕ್ಷಣದಿಂದ ಜಾರಿಗೆ ಬರುವಂತೆ ಮೇಲ್ಕಂಡ ಎಲ್ಲ ರೀತಿಯ ಪ್ಲಾಸ್ಟಿಕ್ ವಸ್ತುಗಳನ್ನು ನಿಷೇಧಿಸಲಾಗಿದೆ.

ಯಾವುದೇ ವ್ಯಕ್ತಿ, ಅಂಗಡಿ ಮಾಲೀಕರು, ಮಾರಾಟಗಾರರು, ಸಗಟು ಮಾರಾಟಗರರು ಅಥವಾ ಚಿಲ್ಲರೆ ವ್ಯಾಪಾರಿಗಳು ಮತ್ತು ಮಾರಾಟಗಾರರು, ಯಾವುದೇ ದಪ್ಪ ರೀತಿಯ ಪ್ಲಾಸ್ಟಿಕ್ ಕ್ಯಾರಿ ಬ್ಯಾಗ್, ಪ್ಲಾಸ್ಟಿಕ್ ಭಿತ್ತಿಪತ್ರ, ಪ್ಲಾಸ್ಟಿಕ್ ತೋರಣ, ಕ್ಲಿಂಗ್ ಫಿಲ್ಮ್ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆಗಳು, ಥರ್ಮೋಕೋಲ್ ಮತ್ತು ಪ್ಲಾಸ್ಟಿಕ್ ಮೈಕ್ರೋ ಬೀಡ್ಸ್ ನಿಂದ ತಯಾರಾದ ವಸ್ತುಗಳ ಬಳಕೆಯನ್ನು ಮಾಡುವಂತಿಲ್ಲ.

ಈ ಆದೇಶವನ್ನು ಉಲ್ಲಂಘಿಸಿದಲ್ಲಿ 25 ಸಾವಿರ ರೂ.ಗಳವರೆಗೆ ದಂಡ ವಿಧಿಸಲಾಗುವುದು ಹಾಗೂ ಪರಿಸರ ಸಂರಕ್ಷಣೆ ಕಾಯ್ದೆ 1986ರ ಸೆಕ್ಷನ್ 19ರ ಅನ್ವಯ ಪ್ರದತ್ತವಾಗಿರುವ ಅಧಿಕಾರದಂತೆ ಕಾನೂನು ಕ್ರಮ ತೆಗೆದುಕೊಳ್ಳಲಾಗುತ್ತದೆ ಎಂದು ಮುಳಗುಂದ ಪಟ್ಟಣ ಪಂಚಾಯತ್ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ರಾಜ್ಯ ತಂಡದಿಂದ ನರೇಗಾ ಕಾಮಗಾರಿ ಪರಿಶೀಲನೆ



■ವಿಜಯಸಾಕ್ಷಿ ಸುದ್ದಿ, ಗದಗ

ರೋಣ ತಾಲೂಕಿನ ಅಬ್ಬಿಗೇರಿ ಹಾಗೂ ಸವಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಅನುಷ್ಠಾನಗೊಂಡ ವಿವಿಧ ಕಾಮಗಾರಿಗಳ ಸಾಮಗ್ರಿ ಬಿಲ್‌ಗಳ ಈಖಿಔಗಳ ಪರಿಶೀಲನೆ ಕುರಿತು ಅಯುಕ್ತಾಲಯದಿಂದ ಆಗಮಿಸಿದ ರಾಜ್ಯ ತಂಡ ಭೇಟಿ ನೀಡಿ ವಿವಿಧ ಕಾಮಗಾರಿಗಳ ಪರಿಶೀಲನೆ ನಡೆಸಿತು.

ಜಂಟಿ ನಿರ್ದೇಶಕರಾದ ಲಲಿತಾ ರೆಡ್ಡಿ (ಕೃಷಿ) ನೇತೃತ್ವದಲ್ಲಿ ಸದಸ್ಯರಾದ ತನುಜಾ, ಯಶವಂತ ಜಿ.ಎಲ್ ಅವರು ಜಂಟಿ-ಯಾಗಿ ಗ್ರಾ.ಪಂಗಳಿಗೆ ಭೇಟಿ ನೀಡಿ ಕಾಮಗಾರಿಗಳು ಮತ್ತು ದಾಖಲೆಗಳನ್ನು ಪರಿಶೀಲಿಸಿದರು. ಪ್ರಸಕ್ತ ಸಾಲಿನಲ್ಲಿ ಅನುಷ್ಠಾನಗೊಂಡು ಸಾಮಗ್ರಿ ಪಾವತಿಗೆ ಸೃಜನೆ ಮಾಡಲಾದ ಈಖಿಔ ಕಾಮಗಾರಿಗಳ ಪರಿಶೀಲನೆ ನಡೆಸಿದರು.

ಅನುಷ್ಠಾನಗೊಂಡಿರುವ ವೈಯಕ್ತಿಕ ಕಾಮಗಾರಿಗಳ ಕುರಿತು ಪರಿಶೀಲಿಸಿದ ಅವರು, ಯೋಜನೆಯಡಿ ಫಲಾನುಭವಿಗಳು ಪಡೆದುಕೊಂಡ ಸವಲತ್ತುಗಳನ್ನು ಪರಿಶೀಲಿಸಿ ಯೋಜನೆಯಡಿ ಫಲಾನುಭವಿಗಳು ಆರ್ಥಿಕವಾಗಿ, ಸಾಮಾಜಿಕವಾಗಿ ಸ್ವಾವಲಂಬಿ ಜೀವನ ನಡೆಸುತ್ತಿದ್ದಾರೆಯೇ ಎಂಬುದರ ಕುರಿತು ಫಲಾನುಭವಿಗಳ ಜೊತೆಗೆ ಸಮಾಲೋಚಿಸಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಾದ ಚಂದ್ರಶೇಖರ ಬಿ.ಕಂದಕೂರ, ಜಿಲ್ಲಾ ಸಹಾಯಕ ಕಾರ್ಯಕ್ರಮ ಸಂಯೋಜನಾಧಿಕಾರಿ ಕಿರಣಕುಮಾರ ಎಸ್.ಎಚ್, ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಲೋಹಿತ ಎಂ, ಬಸವರಾಜ ಶೃಂಗೇರಿ, ನರೇಗಾ ವಿಭಾಗದ ತಾಲೂಕು ಐಇಸಿ ಸಂಯೋಜಕ ಮಂಜುನಾಥ, ತಾಂತ್ರಿಕ ಸಹಾಯಕ ಪ್ರವೀಣ ಸೂಡಿ, ಗ್ರಾ.ಪಂ ಸಿಬ್ಬಂದಿ ವರ್ಗ ಹಾಗೂ ತಾ.ಪಂ ನರೇಗಾ ಸಿಬ್ಬಂದಿಗಳು ಹಾಜರಿದ್ದರು.

# ಭಾರತದ ಸಂವಿಧಾನ ವಿಶ್ವಕ್ಕೇ ಮಾದರಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಡಾ. ಬಿ.ಆರ್.ಅಂಬೇಡ್ಕರ್ ರಚಿಸಿರುವ ಸಂವಿಧಾನವು ವಿಶ್ವಕ್ಕೇ ಮಾದರಿ ಸಂವಿಧಾನವಾಗಿದೆ ಎಂದು ಪ್ರಾಚಾರ್ಯ ಆರ್.ಎಂ. ಕಲ್ಲನಗೌಡರ ಹೇಳಿದರು.

ಅವರು ಪಟ್ಟಣದ ಆರ್. ಎನ್. ದೇಶಪಾಂಡೆ ಸರಕಾರಿ ಪ್ರಥಮದರ್ಜೆ ಕಾಲೇಜು ಆವರಣದಲ್ಲಿ ಸಂವಿಧಾನ ದಿನಾಚರಣೆ ಅಂಗವಾಗಿ ಸಂವಿಧಾನ ಪಿಠಿಕೆ ಪ್ರತಿಜ್ಞಾವಿಧಿ ಭೋದಿಸಿ ಮಾತನಾಡಿ, ಈ ದಿನ ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮಹತ್ವದ ದಿನವಾಗಿದ್ದು, ನಮ್ಮ ಸಂವಿಧಾನ ದೇಶದ ಜನರನ್ನು ಸಶಕ್ತಗೊಳಿಸಿದೆ. ಸರ್ವರಿಗೂ ಸ ವ ಾ ಾ ನ ತ ೆ ಂ ೊ ದ ಗ ಿ ಸ ಿ ದ ೆ. ಮೂಲಭೂತ ಹಕ್ಕು ಮತ್ತು ಕರ್ತವ್ಯಗಳನ್ನು ನೀಡಿದೆ. ಭಾರತಕ್ಕೆ ಸಂವಿಧಾನವೇ ದೊಡ್ಡ ಬಲವಾಗಿದೆ ಎಂದರು.

ಅನುಪಮಾ, ಕೆ.ಎಂ. ಶಿರೂರ, ಎನ್.ಕೆ. ಕಡೆಮನಿ, ಶಿಂದೂರ, ವಿಠಲ ಪವಾರ, ಬೋಧಕ-ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಇದ್ದರು.

# ಭಗವದ್ಗೀತೆಯು ಪಾಶ್ಚಾತ್ಯರ ಮನಗೆದ್ದಿದೆ

■ವಿಜಯಸಾಕ್ಷಿ ಸುದ್ದಿ, ಗದಗ



ಭಾರತೀಯ ಜ್ಞಾನವು ಸಾಗರದಾಚೆಗಿನ ಪಾಶ್ಚಾತ್ಯರ ಗಮನ ಸೆಳೆದಿದೆ. ಅದರಲ್ಲೂ ಭಗವದ್ಗೀತೆಯು ಪಾಶ್ಚಾತ್ಯರ ಮನಗೆದ್ದ ಮಹಾ ಗ್ರಂಥವಾಗಿದೆ ಎಂದು ಡಾ. ಪಾವಗಡ ಪ್ರಕಾಶ್ ರಾವ್ ನುಡಿದರು.

ಅವರು ಇಲ್ಲಿನ ಕುಮಾರವ್ಯಾಸ ಪ್ರವಚನ ಸಂಚಾಲನ ಸಮಿತಿ ಏರ್ಪಡಿಸಿರುವ ಭಗವದ್ಗೀತಾ ಪ್ರವಚನದ 12ನೇ ದಿನ ಪ್ರವಚನ ನೀಡಿ ಮಾತನಾಡಿ, ರಾಮಾಯಣ, ಭಗವದ್ಗೀತೆ ಹಾಗೂ ಶಂಕರಾಚಾರ್ಯರ ಅದ್ವೈತ ಸಿದ್ಧಾಂತಗಳು ಪಾಶ್ಚಾತ್ಯರನ್ನು ಚಕಿತರನ್ನಾಗಿಸಿದ ಭಾರತೀಯ ಜ್ಞಾನಗಳಾಗಿವೆ. ಭಾರತಕ್ಕೆ ಭೇಟಿ ನೀಡಿದ ವಿದೇಶಿಗರಿಗೆ ನೆನಪಿನ ಕಾಣಿಕೆಯಾಗಿ ತಾಜ್‌ಮಹಲ್‌ನ್ನು ನೀಡುವ ಪದ್ಧತಿ ಇತ್ತು. ಆದರೆ ಇತ್ತೀಚೆಗೆ ಭಗವದ್ಗೀತೆಯನ್ನು ಕಾಣಿಕೆಯಾಗಿ ನೀಡುವ ಅಭ್ಯಾಸ ಆರಂಭವಾಗಿರುವುದು ಶ್ಲಾಘನೀಯ ಎಂದರು.

ತಪಸ್ಸು ಮಾಡಿದರೆ ಮಾತ್ರ ದೇವನೊಲುಮೆ ಸಾಧ್ಯವಿದ್ದು, ಅಚಲ ನಂಬಿಕೆ ಹಾಗೂ ಶ್ರದ್ಧೆಯಿಂದ ದೇವರನ್ನು ಒಲಿಸಿಕೊಂಡು ಅದ್ಭುತಗಳನ್ನು ಸೃಷ್ಟಿಸಿದ ಅನೇಕ ನಿದರ್ಶನಗಳು ನಮ್ಮ ಕಣ್ಮುಂದೆ ಇದೆ. ರಾಮಾಯಣದಲ್ಲಿ ಶ್ರೀರಾಮರ ಕಥೆ ಅಮೋಘ, ನಾವೆಲ್ಲ ರಾಮನನ್ನು ಆರಾಧನೆ ಮಾಡುತ್ತೇವೆ. ಆದರೆ ಅವರಂತೆ ಆದರ್ಶ ಪುರುಷರಾಗುವುದು ಕಷ್ಟಸಾಧ್ಯ. ಕೇವಲ ಹಿಂದೂಗಳಷ್ಟೇ ಅಲ್ಲದೇ ಖಾದರ್ ಎನ್ನುವಂಥ ಮುಸ್ಲಿಂ ವ್ಯಕ್ತಿಯೋರ್ವರು ರಾಮಾಯಣವನ್ನು ಉರ್ದುಗೆ ಅನುವಾದ ಮಾಡಿದ್ದಾರೆ ಎಂದು ತಿಳಿಸಿದರು.

ಡಾ.ಕಲ್ಲೇಶ ಮೂರಶಿಳ್ಳಿನ ನಿರೂಪಿಸಿ ವಂದಿಸಿದರು. ಮಾಜಿ ಶಾಸಕ ಡಿ.ಆರ್. ಪಾಟೀಲ, ಗುರಣ್ಣ ಬಳಗಾನೂರ, ಡಾ. ಎಸ್. ಎಸ್. ಶೆಟ್ಟರ್, ಡಾ.ಜಿ.ಬಿ. ಪಾಟೀಲ, ಅನಿಲ ವೈದ್ಯ, ವಾದಿರಾಜ ರಾಯ್ಕರ, ಡಾ. ಎಸ್.ಡಿ. ಯರಿಗೇರಿ, ಡಾ. ವಿಜಯದತ್ತ ಮಂಗಸೂಳಿ, ಗೋಪಾಲಕೃಷ್ಣ ತಾಸಿನ, ಶಶಿಧರ ಮೂರಶಿಳ್ಳಿನ, ಅನಿಲ ತೆಂಬದಮನಿ, ಗೌರಪ್ಪ ಬೊಮ್ಮಣ್ಣನವರ, ಬಿ.ವಿ ಹಿರೇಮಠ, ಡಾ. ದತ್ತಪ್ರಸನ್ನ ಪಾಟೀಲ ಸೇರಿದಂತೆ ಅನೇಕ ಭಕ್ತರು ಭಾಗವಹಿಸಿದ್ದರು.

**ಪ್ರಾಚ್ಯಾವಶೇಷಗಳ ಅನ್ವೇಷಣಾ ಕಾರ್ಯಕ್ರಮದಲ್ಲಿ ಸಚಿವ ಎಚ್..ಕೆ ಪಾಟೀಲ ಆಶಯ**

# ಲಕ್ಕುಂಡಿಯ ವೈಭವ ಮರುಕಳಿಸುವಂತಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಲಕ್ಕುಂಡಿಯ ಇತಿಹಾಸ, ಪರಂಪರೆ, ಸಂಸ್ಕೃತಿ ಶ್ರೀಮಂತಿಕೆ, ಶಿಲ್ಪಕಲೆಗಳು, ಶಾಸನಗಳ ಜಾಗೃತರಾಗಿ ಲಕ್ಕುಂಡಿಯ ಗತಕಾಲದ ವೈಭವವನ್ನು ಮರುಕಳಿಸಿ ಲಕ್ಕುಂಡಿಯ ಮಹತ್ವವನ್ನು ಜಗತ್ತಿಗೆ ತೋರಿಸಿ ಯುನೆಸ್ಕೋ ಪಟ್ಟಿಗೆ ಸೇರಿಸುವಂತೆ ಮಾಡಬೇಕು ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಗದಗ ತಾಲೂಕಿನ ಲಕ್ಕುಂಡಿಯ ಹಾಲಗುಂಡಿ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯಲ್ಲಿ ಪ್ರಾಚ್ಯಾವಶೇಷಗಳ ಅನ್ವೇಷಣೆ ಕಾರ್ಯಕ್ರಮಕ್ಕೆ ಭಾನುವಾರ ಚಾಲನೆ ನೀಡಿ ಅವರು ಮಾತನಾಡಿದರು.

101 ಬಾವಿ, 101 ದೇವಸ್ಥಾನಗಳ ಇತಿಹಾಸ ಹೊಂದಿರುವ ಲಕ್ಕುಂಡಿಯಲ್ಲಿ ಪ್ರಾಚ್ಯಾವಶೇಷಗಳ ಸಂಗ್ರಹಣೆ ಮೂಲಕ ಹುದುಗಿ ಹೋಗಿರುವ ದೇವಸ್ಥಾನ ಹಾಗೂ ಬಾವಿಗಳ ಅನ್ವೇಷಣೆ ಹಾಗೂ ಮರುಸೃಷ್ಟಿ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಲಕ್ಕುಂಡಿಯಲ್ಲಿರುವ ಶಾಸನಗಳು ಹಾಗೂ ಶಿಲ್ಪಕಲೆಗಳನ್ನು ಕೆಲವರು ಮನೆಗಳನ್ನಾಗಿ ಮಾಡಿಕೊಂಡಿದ್ದಾರೆ, ಕೆಲವರು ಕುರಿ, ಆಕಳು ಕಟ್ಟಿದ್ದಾರೆ. ಅವುಗಳ ಮಹತ್ವ ತಿಳಿಸಿ ಅವುಗಳನ್ನು ಒಂದೆಡೆ ಸಂಗ್ರಹಿಸಿ, ಸಂರಕ್ಷಿಸೋಣ ಎಂದರು.

ಲಕ್ಕುಂಡಿಯಲ್ಲಿ ಕೈಗೊಂಡಿರುವ ಪ್ರಾಚ್ಯಾವಶೇಷಗಳ ಅನ್ವೇಷಣೆ ರಾಜ್ಯಕ್ಕೆ ದಿಕ್ಸೂಚಿಯಾಗಬೇಕು. ಇದರ




ಪ್ರೇರಣೆ ಕರ್ನಾಟಕದ ತುಂಬೆಲ್ಲ ಹರಡಬೇಕು. ಜೀರ್ಣೋದ್ಧಾರ ಆಗಬೇಕು ಎಂದು ಸಚಿವ ಎಚ್.ಕೆ. ಪಾಟೀಲ ಆಶಿಸಿದರು.

ನರಗುಂದ ಶಾಸಕ ಸಿ.ಸಿ. ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಈ ರೀತಿಯ ಪ್ರಾಚ್ಯಾವಶೇಷಗಳ ಅನ್ವೇಷಣೆ ಕಾರ್ಯಕ್ರಮ ಪ್ರಥಮ ಬಾರಿಗೆ ನಡೆಯುತ್ತಿದೆ. ದಾನ ಚಿಂತಾಮಣಿ ಅತ್ತಿಮಬ್ಬೆಯ ಕರ್ಮಭೂಮಿ ಲಕ್ಕುಂಡಿ ಗ್ರಾಮದಲ್ಲಿ ನಡೆಯುತ್ತಿದ್ದು ಸಂತಸ ತಂದಿದೆ ಎಂದರು.

ಪ್ರಚ್ಯಾವಶೇಷಗಳನ್ನು ಸಂಗ್ರಹಣೆ ಮಾಡಿ ಸೂಕ್ತ ಸ್ಥಳದಲ್ಲಿ ಇಟ್ಟು ಮುಂದಿನ ಪೀಳಿಗೆಗೆ ಹಿಂದಿನ ಕಾಲದ ವೈಭವದ ಕುರುಹುಗಳನ್ನು ನೆನೆಪಿಸುವ ಕಾರ್ಯಕ್ರಮ ಇದಾಗಿದೆ. ಮುಂದಿನ ದಿನಗಳಲ್ಲಿ ಇಂದಿನ ಪ್ರಚ್ಯಾವಶೇಷಗಳ ಅನ್ವೇಷಣೆ ಕಾರ್ಯವು ಮಾದರಿಯಾಗಿ ದೇಶದಲ್ಲಿರುವ ಅನೇಕ ಗ್ರಾಮಗಳಲ್ಲಿರುವ ಪ್ರಾಚ್ಯಾವಶೇಷಗಳ ಅನ್ವೇಷಣೆ ನಡೆಯುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ, ಲಕ್ಕುಂಡಿ ಗ್ರಾ.ಪಂ ಅಧ್ಯಕ್ಷ ಕೆಂಚಪ್ಪ ಎಸ್.ಪೂಜಾರ್, ಉಪಾಧ್ಯಕ್ಷೆ ಪುಷ್ಪಾ ಎಸ್.ಪಾಟೀಲ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ವಾಸಣ್ಣ ಕುರಡಗಿ, ಪ್ರವಾಸೋದ್ಯಮ ಇಲಾಖೆ ಕಾರ್ಯದರ್ಶಿ ಸಲ್ಮಾ ಫಾಹಿಮ್, ಪ್ರವಾಸೋದ್ಯಮ ಇಲಾಖೆ ನಿರ್ದೇಶಕ ಡಾ. ಕೆ.ವಿ. ರಾಜೇಂದ್ರ,

ಲಕ್ಕುಂಡಿ, ಲೊಕ್ಕಿಗುಂಡಿ ಎಂಬ ಹೆಸರಿನಿಂದ ರಾಮಾಯಣ, ಮಹಾಭಾರತದ ಕಾಲದಿಂದಲೂ ಪ್ರಸಿದ್ಧಿ ಹೊಂದಿದೆ. ಇಲ್ಲಿಯವರೆಗೆ ಲಕ್ಕುಂಡಿಯ ಇತಿಹಾಸ, ಶಿಲ್ಪಕಲೆಗಳು, ಶಾಸನಗಳನ್ನು ನಿರ್ಲಕ್ಷಿಸಲಾಗಿತ್ತು. ಇಂದು ಜಾಗೃತರಾಗಿ ನಮ್ಮ ಇತಿಹಾಸ, ಪರಂಪರೆ, ಸಂಸ್ಕೃತಿ ಹಾಗೂ ಶ್ರೀಮಂತಿಕೆಯನ್ನು ಜಗತ್ತಿಗೆ ಪರಿಚಯಿಸಿ ಲಕ್ಕುಂಡಿಯು ಜಾಗತಿಕ, ಪಾರಂಪರಿಕ ಪಟ್ಟಿಯಲ್ಲಿ ಸೇರುವುದು ಸನ್ನಿಹಿತವಾಗಿದೆ. ಯುನೆಸ್ಕೋ ಆ ಸ್ಥಾನಮಾನ ಕೊಡುವುದಕ್ಕೆ ಬಹಳ ದಿನ ಬೇಕಾಗಿಲ್ಲ ಎಂದು ಸಚಿವ ಎಚ್.ಕೆ. ಪಾಟೀಲ ವಿಶ್ವಾಸ ವ್ಯಕ್ತಪಡಿಸಿದರು.

ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಮೈಸೂರಿನ ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಆಯುಕ್ತ ದೇವರಾಜು.ಎ, ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಗ್ರಾಮೀಣಾಭಿವೃದ್ಧಿ ವಿ.ವಿ ಕುಲಪತಿ ಪ್ರೊ. ಸುರೇಶ ನಾಡಗೌಡರ, ಜಾನಪದ ವಿ.ವಿ ಕುಲಪತಿ ಟಿ.ಎಂ. ಬಾಸ್ಕರ್, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಸಮಿತಿ ಸದಸ್ಯರುಗಳಾದ ಸಿದ್ಧಲಿಂಗೇಶ್ವರ ಪಾಟೀಲ, ರಾವ್, ಅ.ಥ. ಕಟ್ಟಿಮನಿ, ಉಮೇಶಗೌಡ ಪಾಟೀಲ, ಹನುಮಾಕ್ಷಿ ಬೋಗಿ, ಹಂಪಿ ವಿಶ್ವವಿದ್ಯಾಲಯ ಕುಲಪತಿ ಡಿ.ವಿ. ಪರಮಶಿವಮೂರ್ತಿ, ದೇವರಕೊಂಡ ರೆಡ್ಡಿ, ಲಕ್ಕುಂಡಿ ಗ್ರಾ.ಪಂ ಸದ್ಯಸರು ಹಾಜರಿದ್ದರು.

**'ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯ ತಡೆಗಟ್ಟುವಿಕೆಯ ಅಂತಾರಾಷ್ಟ್ರೀಯ ದಿನ'**

# ಇಂದು ಸ್ತ್ರೀ-ಪುರುಷರಿಬ್ಬರೂ ಸಮಾನರು

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಜಿಲ್ಲಾ ಕಾರ್ಮಿಕ ಇಲಾಖೆ, ಕೈಮಗ್ಗ ಮತ್ತು ಜವಳಿ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಗದಗ ಇವರ ವತಿಯಿಂದ ಮಿಷನ್ ಶಕ್ತಿ ಯೋಜನೆಯಡಿಯಲ್ಲಿ 'ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯ ತಡೆಗಟ್ಟುವಿಕೆಯ ಅಂತಾರಾಷ್ಟ್ರೀಯ ದಿನ'ದ ನಿಮಿತ್ತ ವಿಶೇಷ ಅರಿವು ಮೂಡಿಸುವ ಕಾರ್ಯಕ್ರಮವನ್ನು ಎ.ಸಿ.ಎಂ. ಗಾರ್ಮೆಂಟ್ಸ್ ಗದಗದಲ್ಲಿ ಹಮ್ಮಿಕೊಳ್ಳಲಾಗಿತ್ತು

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಕೆಲಸದ ಸ್ಥಳಗಳಲ್ಲಿ ಮಹಿಳೆ ನೆಮ್ಮದಿಯಿಂದ ಕಾರ್ಯ ನಿರ್ವಹಿಸುವಂತಾಗಲು 10ಕ್ಕಿಂತ ಹೆಚ್ಚು ಮಹಿಳಾ ಸಿಬ್ಬಂದಿ ಒಂದು ಕೆಲಸದ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿದ್ದರೆ ಅಲ್ಲಿ ಆಂತರಿಕ ದೂರು ನಿವಾರಣಾ ಸಮಿತಿ ರಚಿಸಲು ಈಗಾಗಲೇ ಕಾನೂನು ಕ್ರಮ ಕೈಗೊಳ್ಳಲಾಗಿದೆ. ಇಂದು ಸ್ತ್ರೀ ಮತ್ತು ಪುರುಷರಿಬ್ಬರೂ ಸಮಾನರು. ಆದ್ದರಿಂದ ಪುರುಷರಿಗೆ ಇರುವಷ್ಟು ಸೌಕರ್ಯ, ಸೌಲಭ್ಯಗಳು ಮಹಿಳೆಯರಿಗೂ ದೊರಕಬೇಕು. ಒಂದು ವೇಳೆ ಯಾವುದೇ ರೀತಿಯ ದೌರ್ಜನ್ಯ, ಅನ್ಯಾಯಗಳು ಆಗುತ್ತಿದ್ದರೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಅಥವಾ ಇಲಾಖೆ, ಮಹಿಳಾ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವ ಸಂಘ-ಸಂಸ್ಥೆಗಳನ್ನು ಸಂಪರ್ಕಿಸಿ ನ್ಯಾಯ ದೊರಕಿಸಿಕೊಳ್ಳಬೇಕೆಂದು ಮಾಹಿತಿ ನೀಡಿದರು.



ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾ ನಿರೂಪಣಾಧಿಕಾರಿ ರಾಧಾ ಜಿ.ಮಣ್ಣೂರು ಮಾತನಾಡಿ, ಮಿಷನ್ ಶಕ್ತಿ ಯೋಜನೆಯ ಕಾರ್ಯವೈಖರಿ ದೇಶಕ್ಕೆ ಮಾದರಿಯಾಗಬೇಕು. ಮಹಿಳೆಯರು ತಮಗೆ ರಾಜ್ಯ ಸರಕಾರ/ ಕೇಂದ್ರ ಸರ್ಕಾರಗಳು ನೀಡಿದ ಎಲ್ಲ ಯೋಜನೆಗಳ ಸೌಲಭ್ಯವನ್ನು ಪಡೆದುಕೊಂಡು ಅವರು ದೇಶದ ಆರ್ಥಿಕ ಪ್ರಗತಿಯಲ್ಲಿ ಪ್ರಮುಖ ಪಾತ್ರ ವಹಿಸುವಂತೆ ಸಮಾಜದ ಎಲ್ಲ ಸ್ಥರದ ಮಹಿಳೆಯರನ್ನು ಜಾಗೃತಗೊಳಿಸುವುದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಎಲ್ಲ ಅಧಿಕಾರಿಗಳ ಗುರುತರವಾದ ಜವಾಬ್ದಾರಿ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ ಮಾತನಾಡಿ, ಇಲಾಖೆಯು ಈಗಾಗಲೇ ಮಹಿಳೆ ಮತ್ತು ಮಕ್ಕಳ ಕ್ಷೇತ್ರದಲ್ಲಿ ಗಣನೀಯವಾದ ಸೇವೆಯನ್ನು ನೀಡುತ್ತಿದೆ. ಮಹಿಳೆ ಮತ್ತು ಮಕ್ಕಳ ಅಪೌಷ್ಠಕತೆಯನ್ನು ಹೊಗಲಾಡಿಸಲು ಪೋಷಣ ಅಭಿಯಾನ, ಮಹಿಳೆಯರ ಮೇಲಿನ ದೌರ್ಜನ್ಯವನ್ನು ತಡೆಗಟ್ಟಲು ಯೋಜನೆ, ಹಲವಾರು ಸೇವೆಗಳು ಒಂದೇ ಕಡೆ ಸಿಗುಂತಾಗಲು ಸಖಿ ಒನ್ ಸ್ಟಾಪ್ ಸೆಂಟರ್, ಗರ್ಭಿಣಿ/ಬಾಣಂತಿಯರಿಗೆ ಆರ್ಥಿಕ ಸಹಾಯವಾಗಲು ಪ್ರಧಾನಮಂತ್ರಿ ಮಾತೃವಂದನಾ ಯೋಜನೆ, ಭಾಗ್ಯಲಕ್ಷ್ಮೀ/ಸುಕನ್ಯಾ ಸಮೃದ್ಧಿ ಯೋಜನೆ ಹೀಗೆ ಹಲವಾರು ಯೋಜನೆಗಳ ಜೊತೆಗೆ ಮಿಷನ್ ಶಕ್ತಿ ಯೋಜನೆಯು ಸಮಾಜದ ಪ್ರತಿಯೊಬ್ಬ ಹೆಣ್ಣು ಮಗು/ಮಹಿಳೆಯರಿಗೆ ಸುರಕ್ಷತೆ, ಭದ್ರತೆ ಹಾಗೂ ಸಬಲೀಕರಣಕ್ಕಾಗಿ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ ಎಂದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಶೈಲ್ ಸೋಮನಕಟ್ಟಿ ಮಾತನಾಡಿ, ಇಂದು ಮಹಿಳೆಯರು ಸ್ವತಂತ್ರವಾಗಿ ಪ್ರತಿಯೊಂದು ಕ್ಷೇತ್ರದಲ್ಲಿ ತಮ್ಮದೇ ಆದ ಛಾಪನ್ನು ಮೂಡಿಸಲು ತಯಾರಿದ್ದಾರೆ. ಆದರೆ ಅವರಿಗೆ ಸರಿಯಾದ ಮಾಹಿತಿ, ಸಹಕಾರ ಹಾಗೂ ಮಾರ್ಗದರ್ಶನದ ಕೊರತೆ ಇದೆ. ಮಿಷನ್ ಶಕ್ತಿ ಮುಖ್ಯವಾದ ಉದ್ದೇಶ ಸಮಾಜದ ಪ್ರತಿಯೊಂದು ಸ್ಥರದ ಮಹಿಳೆಯರಿಗೆ ಸಮಯಕ್ಕೆ ಸರಿಯಾಗಿ ಅವರಿಗೆ ಅವಶ್ಯವಿರುವ ಸಂದರ್ಭದಲ್ಲಿ ಮಾಹಿತಿ, ಸಮಾಲೋಚನೆ, ಅಗತ್ಯ ನೆರವು ನೀಡುವುದು ಈ ಯೋಜನೆಯ ಗುರಿಯಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧೀಕ್ಷಕಿ ಪ್ರಭಾವತಿ ಮುದಿಗೌಡರ್, ಕೈಮಗ್ಗ ಮತ್ತು ಜವಳಿ ಇಲಾಖೆಯ ಸಹಾಯಕ ನಿರ್ದೇಶಕ ಸೋಮಶೇಖರ ಮಿನಜಗಿ, ಎಸಿಎಂ ಗಾರ್ಮೆಂಟ್ಸ್‌ನ ಅಶೋಕ ರಾಠೋಡ, ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

ಶ್ರೀಧರ ಪೂಜಾರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## ಬೇಟಿ ಬಚಾವೊ ಬೇಟಿ ಪಡಾವೊ ಅರಿವು ಕಾರ್ಯಕ್ರಮ




■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಗ್ರಾಮ ಪಂಚಾಯಿತಿ ಸಹಯೋಗದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಶು ಅಭಿವೃದ್ಧಿ ಯೋಜನೆ ಗದಗ ಹಾಗೂ ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ಆಶ್ರಯದಲ್ಲಿ ಮಿಷನ್ ಶಕ್ತಿ ಯೋಜನೆಯ 'ಬೇಟಿ ಬಚಾವೋ ಬೇಟಿ ಪಡಾವೋ' ಅರಿವು ಮೂಡಿಸುವ ಕಾರ್ಯಕ್ರಮವು ಸರಕಾರಿ ಪ್ರಾಥಮಿಕ ಹೆಣ್ಣು ಮಕ್ಕಳ ಶಾಲೆಯಲ್ಲಿ ಜರುಗಿತು.

ಸಮಾಜದಲ್ಲಿ ಲಿಂಗ ಸಮಾನತೆ, ಹೆಣ್ಣು ಮಕ್ಕಳ ಪೋಷಣೆ, ಭ್ರೂಣ ಹತ್ಯೆ ತಡಗಟ್ಟುವಿಕೆ, ಹೆಣ್ಣು ಮಕ್ಕಳ ಸ್ಥಿತಿ-ಗತಿ ಹೆಚ್ಚಿಸಲು ಹಾಗೂ ಹೆಣ್ಣು ಮಗು ಶೈಕ್ಷಣಿಕವಾಗಿ ಸದೃಢವಾಗಲು, ಹೆಣ್ಣು ಮತ್ತು ಗಂಡು ಎಂಬ ತಾರತಮ್ಯ ನೀತಿಯನ್ನು ಹೋಗಲಾಡಿಸುವ ಕುರಿತು ಕಾರ್ಯಕ್ರಮದಲ್ಲಿ ಜಾಗೃತಿ ಮೂಡಿಸಲಾಯಿತು.

ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಜಿಲ್ಲಾ ಮಹಿಳಾ ಸಬಲೀಕರಣ ಸಂಯೋಜಕರಾದ ಮಧುಶ್ರೀ, ರಾಜೇಶ್ವರಿ, ಪಿ.ಡಿ.ಓ ರಾಜಕುಮಾರ ಭಜಂತ್ರಿ, ತುಕಾರಾಮ ಹುಲಗಣ್ಣವರ, ಅಂಗನವಾಡಿ ಮೇಲ್ವಿಚಾರಕಿ ಸಾಹೀದಬೇಗಂ ಹತ್ತಿವಾಲೆ, ಮುಖ್ಯೋಪಾಧ್ಯಾಯ ಎಸ್.ಎಸ್.ಕಂಬಳಿ, ಅಂಗನವಾಡಿ ಕಾರ್ಯಕರ್ತರು ಹಾಜರಿದ್ದರು.

## ಡಾ. ಎಚ್.ಕೆ. ಪಾಟೀಲ ಸೇವಾ ತಂಡದಿಂದ ಉಚಿತ ಕಣ್ಣಿನ ಶಸ್ತ್ರಚಿಕಿತ್ಸೆ

■ವಿಜಯಸಾಕ್ಷಿ ಸುದ್ದಿ, ಗದಗ

ಹುಲಕೋಟಿ ಕೆ.ಎಚ್. ಪಾಟೀಲ ಆಸ್ಪತ್ರೆ ಹಾಗೂ ಸಂಶೋಧನಾ ಸಂಸ್ಥೆಯ ವತಿಯಿಂದ ಡಾ. ಎಚ್.ಕೆ. ಪಾಟೀಲ ಸೇವಾ ತಂಡದ ಸಂಯೋಗದಲ್ಲಿ ಗದಗ-ಬೆಟಗೇರಿ ನಗರಸಭ್ಯ ವಾರ್ಡ್ ನಂ. 5ರ ನರಸಾಪೂರ ಆಶ್ರಯ ಕಾಲೋನಿಯಲ್ಲಿ ಉಚಿತ ನೇತ್ರ ತಪಾಸಣೆ ನಡೆಸಿ, 15ಕ್ಕೂ ಹೆಚ್ಚು ಜನರನ್ನು ಶಸ್ತ್ರಚಿಕಿತ್ಸೆಗೆ ಕಳುಹಿಸಲಾಯಿತು.




ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರು ಹಾಗೂ ಎಚ್.ಕೆ. ಪಾಟೀಲ ಸೇವಾ ತಂಡದ ಕ್ಯಾಪ್ಟನ್‌ರಾದ ಶಕೀರ ಕಾತರಕಿ ಮಾತನಾಡಿ, ಬಡವರ ಆರೋಗ್ಯ ಹಿತದೃಷ್ಟಿಯಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಬಿಪಿ, ಶುಗರ್ ಇತರೆ ಕಾಯಿಲೆಗಳ ತಪಾಸಣೆ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಇದು ಬಡವರಿಗೆ ಅತ್ಯಂತ ಉಪಯೋಗದಾಯಕವಾಗಿದೆ. ಅಲ್ಲದೇ ಕಣ್ಣಿನಲ್ಲಿ ದೋಷವಿದ್ದವರಿಗೆ ಕಣ್ಣಿನ ಶಸ್ತ್ರಚಿಕಿತ್ಸೆಗಾಗಿ ಕಳುಹಿಸಲಾಗಿದೆ. ಇದೆಲ್ಲವನ್ನೂ ಉಚಿತವಾಗಿ ಮಾಡಿಕೊಡಲಾಗುತ್ತಿದೆ. ಇದು ನಮ್ಮ ಗದಗ ಜಿಲ್ಲೆಯ ಉಸ್ತುವಾರಿ ಸಚಿವರಾದ ಹೆಚ್.ಕೆ. ಪಾಟೀಲರವರ ಜನಪರ ಕಾಳಜಿ ಎಂದರು.

ಕಾಂಗ್ರೆಸ್ ಮೀನುಗಾರಿಕೆ ವಿಭಾಗದ ಮುಂಚೂಣಿ ಘಟಕದ ಅಧ್ಯಕ್ಷರಾದ ಸಂಗಮೇಶ ಹಾದಿಮನಿ ಮಾತನಾಡಿ, ಬಡವರ ಪಾಲಿನ ಕಣ್ಮಣಿಯಾದ ಎಚ್.ಕೆ. ಪಾಟೀಲ ಜನಪರ ವೈದ್ಯಕೀಯ ಸೇವೆಯೊಂದಿಗೆ ಇತರೆ ಸೇವೆಗಳನ್ನು ತಲಪುಸುತ್ತಿರುವುದು ಬಡವರ ಮುಖದಲ್ಲಿ ಮಂದಹಾಸ ಮೂಡಿಸಿದೆ ಎಂದರು.

ಈ ಸಂದರ್ಭದಲ್ಲಿ ನಾಗರಾಜ ಮುಳ್ಳಾಳ, ಸಾಗರ ಪವಾಡಶೆಟ್ಟರ್ ಸೇರಿದಂತೆ ಬಡಾವಣೆಯ ಯುವಕರು, ಹಿರಿಯರು ಉಪಸ್ಥಿತರಿದ್ದರು.



ಬೆಂಗಳೂರಿನ ಎಪ್ಸಾನ್ ಕಂಪನಿಯವರು ಲಕ್ಷ್ಮೇಶ್ವರ ತಾಲೂಕಿನ ಶಿಗ್ಲಿಯ ಜಿಎಂಪಿಎಸ್ ಶಾಲೆಯ ವಿದ್ಯಾರ್ಥಿಗಳಿಗೆ 25 ಸಾವಿರ ರೂ ಮೌಲ್ಯದ ಸ್ಕೂಲ್ ಬ್ಯಾಗ್ ವಿತರಿಸಿದರು. ಈ ಸಂದರ್ಭದಲ್ಲಿ ಎನ್.ವಿ. ಕುಲಕರ್ಣಿ, ಆರ್.ಡಿ. ಕಾಲಾಯಗರ, ಎಸ್.ಬಿ. ಅಣ್ಣಿಗೇರಿ, ಆರ್.ಎಫ್. ಕಪ್ಪತ್ತನವರ, ಎಲ್. ತಿಪ್ಪನಾಯಕ್, ದೀಪಾ ಬಿ, ನೇತ್ರಾ ಬದಾಮಿ ಸೇರಿದಂತೆ ವಿದ್ಯಾರ್ಥಿಗಳಿದ್ದರು.




ಲಕ್ಷ್ಮೇಶ್ವರ ಪಟ್ಟಣದ ಪುರಸಭೆಯ ವಾರ್ಡ್ ನಂ.13ರ ಸದಸ್ಯ ಸ್ಥಾನಕ್ಕೆ ಅವಿರೋಧ ಆಯ್ಕೆಯಾದ ಶೋಭಾ ಬಸವರಾಜ ಮೆಣಸಿನಕಾಯಿ ಅವರಿಗೆ ತಹಸೀಲ್ದಾರರು ಸದಸ್ಯತ್ವ ಪ್ರಮಾಣಪತ್ರ ನೀಡಿದರು. ಚುನಾವಣಾಧಿಕಾರಿ ಚಂದ್ರಶೇಖರ ನರಸಮ್ಮನವರ, ಪುರಸಭೆ ಸದಸ್ಯರಾದ ಅಶ್ವಿನಿ ಅಂಕಲಕೋಟಿ, ವಾಣಿ ಹತ್ತಿ, ಮಂಜುಳಾ ಗುಂಜಳ, ವಿಜಯ ಹತ್ತಿಕಾಳ, ಸಿದ್ದನಗೌಡ ಬಳ್ಳೊಳ್ಳಿ, ನವೀನ ಬೆಳ್ಳಟ್ಟಿ, ಭರಮಪ್ಪ ಕೊಡ್ಲಿ, ಬಂಗಾರೆಪ್ಪ ಮುಳಗುಂದ ಮುಂತಾದವರಿದ್ದರು.

## ರಾಜ್ಯ ಮಟ್ಟದ ಅಬ್ಯಾಕಸ್ ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳು ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ಸ್ಮಾರ್ಟ್ ಕಿಡ್ಸ್ ಅಬ್ಯಾಕಸ್ ವಿದ್ಯಾರ್ಥಿಗಳಿಗೆ ರವಿವಾರ ಬೆಳಗಾವಿ ಜಿಲ್ಲೆಯ ಗೋಕಾಕ ಪಟ್ಟಣದಲ್ಲಿ ರಾಜ್ಯಮಟ್ಟದ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು. ಈ ಸ್ಪರ್ಧೆಯಲ್ಲಿ ಗದಗ ಜಿಲ್ಲೆಯ ಶಿಕ್ಷಕಿ ಶ್ವೇತಾ ಕಲಾಲ ನೇತೃತ್ವದಲ್ಲಿ ವಿದ್ಯಾರ್ಥಿಗಳು ಭಾಗವಹಿಸಿ ಬಹುಮಾನಗಳನ್ನು ಪಡೆದಿಕೊಂಡಿದ್ದು ಜಿಲ್ಲೆಗೆ ಹಾಗೂ ಅಬ್ಯಾಕಸ್ ಶಾಲೆಗೆ ಹೆಮ್ಮೆಯ ವಿಷಯವಾಗಿದೆ ಎಂದು ಸಂಸ್ಥೆಯ ಮುಖ್ಯಸ್ಥ ಸಂತೋಷ್ ಕಲಾಲ ತಿಳಿಸಿದ್ದಾರೆ.




ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಮಕ್ಕಳಿಗೆ ಅಬ್ಯಾಕಸ್ ಶಿಕ್ಷಣ ನೀಡುವುದರಿಂದ ಮಕ್ಕಳ ಕಲಿಕೆಯ ಸಾಮರ್ಥ್ಯ ಹೆಚ್ಚಳ, ಏಕಾಗ್ರತೆ, ಜ್ಞಾಪಕ ಶಕ್ತಿ ಹೆಚ್ಚಳ, ತಾರ್ಕಿಕ ಶಕ್ತಿ ಮತ್ತು ಕಲಾತ್ಮಕ ಗುಣಗಳು, ಭಯ, ಆತಂಕ ನಿವಾರಣೆಯಾಗಲಿದೆ ಮತ್ತು ಮಕ್ಕಳ ಉಜ್ವಲ ಭವಿಷ್ಯಕ್ಕೆ ಅಬ್ಯಾಕಸ್ ಸಹಕಾರಿಯಾಗಲಿದೆ ಎಂದು ಹೇಳಿದರು.

ರಾಜ್ಯ ಮಟ್ಟದ ಅಬ್ಯಾಕಸ್ ಸ್ಪರ್ಧೆಯಲ್ಲಿ ಗದಗ ಜಿಲ್ಲೆಯಿಂದ ಪಾಲ್ಗೊಂಡು ಸಾಧನೆ ಗೈದ ವಿದ್ಯಾರ್ಥಿಗಳಾದ ಫಕ್ಕೀರಡ್ಡಿ ಪ್ರವೀಣರಡ್ಡಿ ಹುಚ್ಚಣ್ಣವರ್ - ಪ್ರಥಮ ಬಹುಮಾನ, ಬಸವಪ್ರಭು ಹವಳದ್ - ಪ್ರಥಮ ಬಹುಮಾನ, ಪ್ರಣಿಕಾ ಸಂತೋಷ್ ಕಲಾಲ್ - ಪ್ರಥಮ ಬಹುಮಾನ, ಪ್ರತಿಭಾ ಮಂಜುನಾಥ ಡಂಬಳ - ದ್ವಿತಿಯ ಬಹುಮಾನ, ಫರ್ಹಾತ್ ಎಂ. ಹುಯಿಲಗೋಳ - ದ್ವಿತಿಯ ಬಹುಮಾನ, ಶ್ರೀನಿಧಿ ಸಂಕಪ್ಪ ನೈನಾಪುರ - ತೃತೀಯ ಬಹುಮಾನ, ವಿರಾಟ್ ಸಂತೋಷ್ ಕಲಾಲ್ - ತೃತೀಯ ಬಹುಮಾನ, ಶ್ರೇಯಾಂಕ್ ಎಸ್. ಬಳಿಗಾರ್ - ರನ್ನರ್ ಅಪ್ , ಸಿಂಚನಾ ಎಸ್. ಜವಾರಿ - ರನ್ನರ್ ಅಪ್ ಗಳಿಸಿದ್ದಾರೆ.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳಾದ ಅನ್ವಿತಾ ಅರ್ಮಾನಿ, ಭರತ್ ಮಂಜುನಾಥ್ ಡಂಬಳ, ಭೂಷಣ ಮಂಜುನಾಥ್ ಡಂಬಳ, ಸಿದ್ದೇಶ್ವರಯ್ಯ ಶಿವಯೋಗಿ ಗುದ್ದಿಮಠ, ಝೈನಾ ಎಂ. ಹುಯಿಲಗೋಳ, ಅಮೀರ್ ಹಮ್ಜಾ ಎಂ.ಹುಯಿಲಗೋಳ, ಧರ್ಮಶ್ರೀ ಸಂಕಪ್ಪ ನೈನಾಪುರ, ಭೂಮಿಕಾ ವಿಜಯ್ ರೇವಂಕಿ, ಮೋಹಿತ್ ಸೇರಿದಂತೆ ಸಂಸ್ಥೆಯ ಸಿಬ್ಬಂದಿ ವರ್ಗ ಶಿಕ್ಷಕರು ಹಾಜರಿದ್ದರು.

ಇದೇ ವೇಳೆ ಗದಗನ ಸ್ಮಾರ್ಟ್ ಕಿಡ್ಸ್ ಅಬ್ಯಾಕಸ್ - ಗದಗ (ಹುಡ್ಕೊ ಕಾಲೋನಿ) ಓಂ ಶಾಂತಿ ಭವನದ ಹಿಂದೆ ಇರುವ ಶಾಖೆಗೆ ಅತ್ಯುತ್ತಮ ಫ್ರಾಂಚೈಸಿ ಪ್ರಶಸ್ತಿಯನ್ನು ಶಾಖೆಯ ಮುಖ್ಯಸ್ಥೆ ಶ್ವೇತಾ ಕಲಾಲ ಅವರು ಸ್ವೀಕರಿಸಿದರು.

**ದಾಸಶ್ರೇಷ್ಠ ಭಕ್ತ ಕನಕದಾಸರ 537ನೇ ಜಯಂತ್ಯುತ್ಸವ, ಸಾಧಕರಿಗೆ ಸನ್ಮಾನ**

# ಕನಕದಾಸರ ತತ್ವಾದರ್ಶಗಳನ್ನು ಮಕ್ಕಳಿಗೆ ತಿಳಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಕುಟುಂಬಕ್ಕಾಗಿ ಬದುಕಿದವರನ್ನು ಮರೆಯುತ್ತಾರೆ. ಸಮಾಜಕ್ಕಾಗಿ ಬದುಕಿದವರನ್ನು ಎಲ್ಲರೂ ಸ್ಮರಿಸುತ್ತಾರೆ ಎಂದು ಹುಲಿಜಂತಿಯ ಪೂಜ್ಯಶ್ರೀ ಮಾಳಿಂಗರಾಯ ಮಹಾರಾಯರು ಹೇಳಿದರು.

ಅವರು ನಗರದ ಕನಕಭವನದಲ್ಲಿ ಕರ್ನಾಟಕ ಪ್ರದೇಶ ಕುರುಬರ ಸಂಘ ಹಾಗೂ ಸಮಾಜದ ಸಹಯೋಗದಲ್ಲಿ ಮಂಗಳವಾರ ನಡೆದ ದಾಸಶ್ರೇಷ್ಠ ಭಕ್ತ ಕನಕದಾಸರ 537ನೇ ಜಯಂತ್ಯುತ್ಸವ, ಸಾಧಕರಿಗೆ ಸನ್ಮಾನ ಹಾಗೂ ರಕ್ತದಾನ ಶಿಬಿರದ ಸಾನ್ನಿಧ್ಯ ವಹಿಸಿ ಮಾತನಾಡುತ್ತಿದ್ದರು.

ಕನಕದಾಸರ ಹೆಸರಿನಲ್ಲಿ ಜಯಂತಿ ಆಚರಿಸಿದರೆ ಸಾಲದು, ಅವರ ತತ್ವಾದರ್ಶ ಹಾಗೂ ಸಂಸ್ಕಾರವನ್ನು ಮಕ್ಕಳಿಗೆ ತಿಳಿಸಿಕೊಡಬೇಕಾಗಿದೆ. ಹಾಲುಮತ ಸಮಾಜ ಕಲ್ಮಶವಿಲ್ಲದ ಶುದ್ಧ ಹಾಲಿನಂತಹ ಸಮಾಜವಾಗಿದೆ. ಆದರೆ, ಇಲ್ಲಿ ಹೆಪ್ಪು ಹಾಕುವದಕ್ಕಿಂತ ಉಪ್ಪು ಹಾಕುವವರೇ ಹೆಚ್ಚಾಗಿದ್ದು, ಅಂತವರಿಂದ ಎಚ್ಚರವಹಿಸಿ ಸಮಾಜವನ್ನು ಸಂಘಟಿಸಬೇಕು ಎಂದು ಹೇಳಿದರು.



ಧಾರವಾಡ ಮನಸೂರ ಶ್ರೀಮಠದ ಪೂಜ್ಯಶ್ರೀ ಬಸವರಾಜ ದೇವರು ಮಾತನಾಡಿ, ಕನಕದಾಸರು ಮನಸ್ಸು ಮಾಡಿದ್ದರೆ ವಿಜಯನಗರ ಸಾಮ್ರಾಜ್ಯದಲ್ಲಿ ಅಧಿಪತಿಯಾಗುತ್ತಿದ್ದರು. ಆದರೆ, ಅಲ್ಲಿನ ಜಾತೀಯತೆಯಿಂದ ಅವರಿಗೆ ಯೋಗ ಸಿಗಲಿಲ್ಲ. ನಂತರ ಹಕ್ಕ-ಬುಕ್ಕರು ಹಾಲುಮತ ಸಮಾಜದವರಿಗೆ ಸ್ಥಾನಮಾನ ಒದಗಿಸಿಕೊಟ್ಟರು. ಅದ್ದರಿಂದ ನಮ್ಮ ಹಕ್ಕುಗಳಿಗಾಗಿ ಜಾತಿವಾದಿಗಳಿಗೆ ಒಗ್ಗಟ್ಟಿನ ಮೂಲಕ ನಮ್ಮ ಶಕ್ತಿ ತೋರಿಸಬೇಕಾಗಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಹಲವು ಸಾಧಕರಿಗೆ ಉಭಯ ಶ್ರೀಗಳು ಸೇರಿದಂತೆ ಗಣ್ಯರು ಸನ್ಮಾನಿಸಿ ಗೌರವಿಸಿದರು. ಇದಕ್ಕೂ ಮುನ್ನ ರಕ್ತದಾನ ಶಿಬಿರದಲ್ಲಿ ಹಲವಾರು ಯುವಕರು ರಕ್ತದಾನ ಮಾಡಿದರು. ಡಾ. ದತ್ತಾತ್ರೇಯ ವೈಕುಂಠೆ ಅವರು ಉಚಿತವಾಗಿ ರಕ್ತ ತಪಾಸಣೆ ನಡೆಸಿದರು. ನಂತರ ದಾಸಶ್ರೇಷ್ಠ ಭಕ್ತ ಕನಕದಾಸರ ಭಾವಚಿತ್ರದೊಂದಿಗೆ ಭವ್ಯ ಮೆರವಣಿಗೆ ನಡೆಯಿತು.

ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕ್ಕೀರಪ್ಪ ಹೆಬಸೂರ ಅಧ್ಯಕ್ಷತೆ ವಹಿಸಿ ಮಾತನಾಡಿ, 1983ರಲ್ಲಿ ರಾಮಕೃಷ್ಣ ಹೆಗಡೆ ಅವರು ಮುಖ್ಯಮಂತ್ರಿಯಾದ ಸಂದರ್ಭದಲ್ಲಿ ಅಂದು ಸಚಿವರಾಗಿದ್ದ ಸಿದ್ದರಾಮಯ್ಯ ಅವರು ಕನಕದಾಸರ ಜಯಂತಿ ಆಚರಣೆಗೆ ಚಾಲನೆ ನೀಡಿದರು. ಅಂದಿನಿಂದ ಇಂದಿನವರೆಗೆ ಕನಕದಾಸರ ಜಯಂತಿಯನ್ನು ಆಚರಿಸಿಕೊಂಡು ಬರಲಾಗುತ್ತಿದೆ. ಗದುಗಿನ ಕನಕಭವನ ಸಮಾಜದ ಆಸ್ತಿಯಾಗಿದೆ. ಇಂದಿನ ಯುವಕರು ಸಮಾಜವನ್ನು ಸಂಘಟಿಸಿ ಇನ್ನಷ್ಟು ಬಲಪಡಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ರವಿ ದಂಡಿನ, ಡಾ. ಗೋವಿಂದಪ್ಪನವರ, ಬೆಟಗೇರಿ ಪಿಎಸ್‌ಐ ಲಕ್ಷ್ಮಣ ಅರಿ, ಪ್ರಕಾಶ ಕರಿ, ಶರಣಪ್ಪ ದೊಣ್ಣೆಗುಡ್ಡ ಮುಂತಾದವರು ಮಾತನಾಡಿದರು. ಪ್ರೊ. ಕರಿಯಪ್ಪ ಕೊಡವಳ್ಳಿ ಕನಕದಾಸರ ಜೀವನ ಕುರಿತು ಉಪನ್ಯಾಸ ನೀಡಿದರು.

ವೇದಿಕೆ ಮೇಲೆ ಬಿ.ಎಫ್. ದಂಡಿನ, ಡಾ. ಜಿ.ಬಿ. ಬಿಡಿನಹಾಳ, ಶಂಕುಂತಲಾ ದಂಡಿನ, ಸುರೇಖಾ ಕುರಿ, ನಾಗಪ್ಪ ಗುಗ್ಗರಿ, ನಾಗರಾಜ ಮೆಣಸಗಿ, ರಾಮಕೃಷ್ಣ ರೊಳ್ಳಿ, ಎಸ್.ಕೆ. ಪಾಟೀಲ, ರಾಜು ಕಲ್ಲೂರ, ರಾಮಣ್ಣ ಹೂವಣ್ಣವರ, ಪ್ರಲ್ಹಾದ ಹೊಸಳ್ಳಿ, ಚನ್ನಮ್ಮ ಹುಳಕಣ್ಣವರ, ಉಮಾ ದ್ಯಾವನೂರ, ನೇತ್ರಾವತಿ ಗುಂಡಿಕೇರಿ, ಮಂಜುನಾಥ ಜಡಿ, ಹೇಮಂತ ಎಸ್.ಜಿ., ಕುಮಾರ ಮಾರನಬಸರಿ, ಬಸವರಾಜ ಕುರಿ, ರವಿ ವಗ್ಗನವರ, ಶೇಖಣ್ಣ ಕಾಳೆ, ಮಂಜುನಾಥ ಮುಂಡವಾಡ, ರವಿ ಜೋಗಿನ, ಶಿವಣ್ಣ ಶಿಂಗಟಾಲಕೇರಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು. ರೇಖಾ ಜಡಿ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಪ್ರೊ. ಮಾರುತಿ ಮಡ್ಡಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## ಸಾರ್ವಜನಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಮುಂಡರಗಿ ಪುರಸಭೆಯು ಪ್ರತಿ ವರ್ಷ ಸ್ವಚ್ಛ ಸರ್ವೇಕ್ಷಣದಲ್ಲಿ ಅತ್ಯುತ್ತಮ ಪ್ರಗತಿ ಸಾಧಿಸಿದ್ದು, ವಾರ್ಡಗಳ ಸ್ವಚ್ಛತೆ, ವಾಣಿಜ್ಯ ಪ್ರದೇಶಗಳಲ್ಲಿ ಘನ ತ್ಯಾಜ್ಯ ನಿರ್ವಹಣೆಗಳನ್ನು, ಘನತ್ಯಾಜ್ಯ ನಿರ್ವಹಣೆ ನಿಯಮ-2016, ಪ್ಲಾಸ್ಟಿಕ್ ತ್ಯಾಜ್ಯ ನಿಯಮ-2016 ಹಾಗೂ ಕಟ್ಟಡಗಳ ಕಟ್ಟುವಿಕೆ ಹಾಗೂ ಕೆಡುವಿಕೆ ತ್ಯಾಜ್ಯ ನಿಯಮ (ಸಿ ಆಂಡ್ ಡಿ)-2016 ರೀತ್ಯಾ ಕ್ರಮ ವಹಿಸಲಾಗುತ್ತಿದೆ.

ಪ್ರಸಕ್ತ ಸಾಲಿನಲ್ಲಿ ಮುಂಡರಗಿ ಪುರಸಭೆಯನ್ನು ತ್ಯಾಜ್ಯ ಮುಕ್ತಗೊಳಿಸುವಲ್ಲಿ (ಜಿ.ಎಫ್.ಸಿ) ಪುರಸಭೆಯ. ಸಹಕಾರ ಹಾಗೂ ಪಾಲ್ಗೊಳ್ಳುವಿಕೆಯಿಂದ ಯಶ್ವಸಿಯಾಗಿದೆ. ಮುಂಡರಗಿ ನಗರಕ್ಕೆ ಒಂದು ಸ್ಟಾರ್ (ಸಿಂಗಲ್ ಸ್ಟಾರ್) ನಗರವೆಂದು ಘೋಷಿಸಿಸುವ ಸಲುವಾಗಿ ತಮ್ಮ ಸಲಹೆ ಸೂಚನೆಗಳು ಇದ್ದಲ್ಲಿ ಮುಂಡರಗಿ ಪುರಸಭೆ ಕಾರ್ಯಾಲಯಕ್ಕೆ ಮೂರು ದಿವಸಗಳೊಳಗಾಗಿ ಸಲ್ಲಿಸಬಹುದಾಗಿದೆ. ಹೆಚಿನ ಮಾಹಿತಿಗಾಗಿ ಮುಂಡರಗಿ ಪುರಸಭೆ ಕಾರ್ಯಾಲಯದ ದೂರವಾಣಿ ಸಂಖ್ಯೆ-08371-262232 ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

**ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಗದಗ,**

ಇ-ಮೇಲ್ : apmcgadag4@gmail.com (08372) ದೂ : 238354, ಫ್ಯಾಕ್ಸ : 237897

ಸಂ: ಕೃಉಮಾಸ:ಗ: 528 : 2024-2025 ದಿನಾಂಕ : 26-11-2024

**ಪ್ರಕಟಣೆ**

ಈ ಮೂಲಕ ಯಾವತ್ತೂ ರೈತಬಾಂಧವರಿಗೆ, ಮತ್ತು ಪೇಟೆ ಕಾರ್ಯಕರ್ತರಿಗೆ ತಿಳಿಯಪಡಿಸುವದೇನೆಂದರೆ, **ಮೆ: ಮಹಾಲಕ್ಷ್ಮಿ ಟ್ರೇಡಿಂಗ್ ಕಂಪನಿ** ತಮ್ಮ ಸಂಸ್ಥೆಯ ಪಾಲುದಾರಿಕೆ ಡಿಡ್ ಬದಲಾವಣೆ ಮಾಡಿಕೊಂಡಿರುವುದನ್ನು ಮತ್ತು ಸದರಿ ಸಂಸ್ಥೆಯ ಹೆಸರಿನಲ್ಲಿರುವ ನಿವೇಶನದ ತಿದ್ದುಪಡಿ, ದಸ್ತಾವೇಜು ಮಾಡಿಕೊಡುವಂತೆ ಕೋರಿರುತ್ತಾರೆ. ಈ ಕುರಿತು ತಮಗೆ ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಪ್ರಕಟಣೆ ದಿನಾಂಕದಿಂದ 15 ದಿನಗಳ ಒಳಗಾಗಿ ಸಮಿತಿಯ ಕಾರ್ಯದರ್ಶಿಯವರಿಗೆ ಲಿಖಿತ ಮೂಲಕ ಸಲ್ಲಿಸಲು ತಿಳಿಸಲಾಗಿದೆ. ನಿಗದಿತ ಅವಧಿಯ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಸಹಿ/- **ಕಾರ್ಯದರ್ಶಿ** ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಗದಗ

ಸಹಿ/- **ಆಡಳಿತಾಧಿಕಾರಿಗಳು** ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಗದಗ

# ಗುಣಮಟ್ಟದ ಕಾಮಗಾರಿ ಕೈಗೊಳ್ಳಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಕೈಗೊಳ್ಳುವ ಎಲ್ಲ ಕಾಮಗಾರಿಗಳ ನಾಮಫಲಕ ಹಾಗೂ ಎಲ್ಲ ಅಂಶಗಳನ್ನು ನಮೂದಿಸುವಂತೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್. ಅವರು ಸೂಚನೆ ನೀಡಿದರು.

ತಾಲೂಕಿನ ಅಡರಕಟ್ಟಿ ಮತ್ತು ಹುಲ್ಲೂರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿಯ ಉದ್ಯೋಗ ಖಾತ್ರಿ ಯೋಜನೆಯ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲನೆ ಮಾಡಿ ಅವರು ಮಾತನಾಡಿದರು.

ಉದ್ಯೋಗ ಖಾತ್ರಿ ನಾಮಫಲಕದಲ್ಲಿ ಕಡ್ಡಾಯವಾಗಿ ಆಯುಕ್ತಾಲಯದ ಏಕೀಕೃತ ಉಚಿತ ಸಹಾಯವಾಣಿ ಸಂಖ್ಯೆ (8277506000) ದಾಖಲಿಸುವಂತೆ ಸೂಚನೆ ನೀಡಿದರು. ಉದ್ಯೋಗ ಖಾತ್ರಿ ಯೋಜನೆಯಲ್ಲಿ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರುವಂತೆ ನೋಡಿಕೊಳ್ಳಬೇಕು ಎಂದು ತಿಳಿಸಿ, ನರೇಗಾ ಯೋಜನೆಯಡಿ ಕೈಗೊಂಡ ಸಿಸಿ ರಸ್ತೆ ಕಾಮಗಾರಿ, ಸಿಸಿ ಗಟಾರ, ಸಿಡಿ ನಿರ್ಮಾಣ, ಸ್ಮಶಾನ ಅಭಿವೃದ್ಧಿ ಕಾಮಗಾರಿ ಸ್ಥಳ ಪರಿಶೀಲನೆ ನಡೆಸಿದರು.

ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಪಂಚಾಯತಿ ವ್ಯಾಪ್ತಿಯಲ್ಲಿ ನರೇಗಾ ಕಾಮಗಾರಿಗಳ ಮೇಲೆ ನಿಗಾವಹಿಸಿ ಗುಣಮಟ್ಟದ ಕಾಮಗಾರಿಗಳಲ್ಲಿ ಯಾವುದೇ ರೀತಿಯ ಲೋಪ ಆಗದಂತೆ ನೋಡಿಕೊಳ್ಳುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ತಾಲೂಕಾ ನರೇಗಾ ಸಿಬ್ಬಂದಿಗಳಿದ್ದರು.

## ಅಂತಾರಾಷ್ಟ್ರೀಯ ಪ್ರಜಾ ಪ್ರಭುತ್ವ ದಿನಾಚರಣೆ | ಮಾನವ ಸರಪಳಿ ನಿರ್ಮಾಣದಲ್ಲಿ ಪಾಲ್ಗೊಂಡಿದ್ದ 3,57,555 ಜನ

# ಧಾರವಾಡ ಜಿಲ್ಲೆಗೆ ಪ್ರಥಮ ಸ್ಥಾನ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಕರ್ನಾಟಕ ಸರ್ಕಾರವು ಕಳೆದ ಸೆಪ್ಟಂಬರ್ 15ರಂದು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ ಪ್ರಜಾಪ್ರಭುತ್ವ ಜಾಗೃತಿ ಮೂಡಿಸಲು ಬೀದರ್‌ನಿಂದ ಚಾಮರಾಜನಗರ ಜಿಲ್ಲೆಯವರೆಗೆ ಮಾನವ ಸರಪಳಿ ನಿರ್ಮಾಣ ಹಾಗೂ ವಿವಿಧ ಕಾರ್ಯಕ್ರಮಗಳಿಗೆ ಧಾರವಾಡ ಜಿಲ್ಲೆಯಿಂದ ಅತೀ ಹೆಚ್ಚು ಜನರು ಆನ್‌ಲೈನ್ ಮೂಲಕ ಹೆಸರು ನೋಂದಣಿ ಮಾಡಿಕೊಂಡು ಭಾಗವಹಿಸಿದ್ದರಿಂದ ಮತ್ತು ವಿಭಿನ್ನ ಕಾರ್ಯ ಕ್ರಮಗಳ ಮೂಲಕ ಪ್ರಜಾಪ್ರಭುತ್ವ ದಿನಾಚರಣೆ ಯಶಸ್ವಿಗೊಳಿಸಿದ್ದರಿಂದ ಧಾರವಾಡ ಜಿಲ್ಲೆಗೆ ರಾಜ್ಯ ಸರ್ಕಾರವು ಪ್ರಥಮ ಸ್ಥಾನದ ಪ್ರಶಸ್ತಿ ಪ್ರಕಟಿಸಿತ್ತು.

ಮಂಗಳವಾರ ಬೆಳಿಗ್ಗೆ ಬೆಂಗಳೂರಿನ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ್ದ ರಾಜ್ಯಮಟ್ಟದ ಸಂವಿಧಾನ



ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರಿಂದ ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಪ್ರಶಸ್ತಿ ಸ್ವೀಕರಿಸಿದರು.

ರಾಜ್ಯ ಸರಕಾರದ ನಿರ್ದೇಶನದಂತೆ ಅಚಿತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಧಾರವಾಡ ಜಿಲ್ಲೆಯಲ್ಲಿ ಸೆ.15ರಂದು ಬೆಳಿಗ್ಗೆ 9.30ರಿಂದ 10.30ರವರೆಗೆ ಜಿಲ್ಲೆಯ ತೇಗೂರ ಗ್ರಾಮ ಹದ್ದೆಯಿಂದ ಮಾವಿನಕೊಪ್ಪ ಗ್ರಾಮ ಹದ್ದೆಯವರೆಗೆ ಸುಮಾರು 51 ಕೀ.ಮಿ.ಉದ್ದದ ಮಾನವ ಸರಪಳಿ ರಚಿಸಲಾಗಿತ್ತು. 9.55ರಿಂದ 10.05ರವರೆಗೆ ಮಾನವ ಸರಪಳಿಯನ್ನು ದಾಖಲೆಗೆ ಪರಿಗಣಿಸಲಾಗಿತ್ತು.

ಮಾನವ ಸರಪಳಿಯಲ್ಲಿ ಒಟ್ಟು 3,57,555 ಜನ ಭಾಗವಹಿಸಿದ್ದರು. ವ್ಯಕ್ತಿಗತವಾಗಿ 47,965 ಮತ್ತು 1914 ಎನ್ ಜಿಓ ಹಾಗೂ ಸಂಘಟನೆಗಳು, ಈ ಸಂಘಟನೆಗಳ 3,07,717 ಜನರು, 129 ವಲಸಿಗರ ಕುಟುಂಗಳು ಮತ್ತು ಈ ಕುಟುಂಬಗಳ ಪೈಕಿ 1,873 ಜನರು ಪಾಲ್ಗೊಂಡಿದ್ದರು. ಒಟ್ಟಾರೆ ಜಿಲ್ಲೆಯಿಂದ ಸಾರ್ವಜನಿಕರು, ವಿದ್ಯಾರ್ಥಿಗಳು ಮತ್ತು ಸರಕಾರಿ ನೌಕರರು, ಕುಟುಂಬಗಳು, ಗ್ರಾಮಗಳ ಜನರು ಸೇರಿದಂತೆ ಸುಮಾರು 3,57,555 ಜನರು ಮಾನವ ಸರಪಳಿಯಲ್ಲಿ ಭಾಗವಹಿಸಿದ್ದರು.

ಈ ಎಲ್ಲ ವಿಶೇಷತೆ ಹಾಗೂ ಹೆಚ್ಚು ಜನ ಆನ್‌ಲೈನ್ ನೋಂದಣಿ ಆಗಿರುವದನ್ನು ಗಮನಿಸಿರುವ ರಾಜ್ಯ ಸರಕಾರ ಧಾರವಾಡ ಜಿಲ್ಲೆಗೆ ಪ್ರಥಮ ಸ್ಥಾನದ ಬಹುಮಾನ ನೀಡಿ, ಗೌರವಿಸಿ ಪ್ರೋತ್ಸಾಹಿಸಿದೆ. ಕಂದಾಯ ಇಲಾಖೆಯ ಸೇವೆಗಳ ಗುಣಮಟ್ಟದ ಅನುಷ್ಠಾನಕ್ಕಾಗಿ ರಾಜ್ಯಕ್ಕೆ ಉತ್ತಮ ಜಿಲ್ಲಾಧಿಕಾರಿ, ಗ್ರಾಮ ಆಡಳಿತ ಅಧಿಕಾರಿ ಮತ್ತು ಉತ್ತಮ ಸಮಾಲೋಚಕ ಪ್ರಶಸ್ತಿ ಗಳಿಸಿದ್ದ ಧಾರವಾಡ ಜಿಲ್ಲೆಗೆ ಈಗ ಪ್ರಜಾಪ್ರಭುತ್ವ ದಿನಾಚರಣೆಯಲ್ಲಿ ರಾಜ್ಯಕ್ಕೆ ಪ್ರಥಮ ಪ್ರಶಸ್ತಿ ಬಂದಿರುವುದು ಜಿಲ್ಲಾಡಳಿತ ಮತ್ತು ಜಿಲ್ಲೆಯ ನೌಕರರಿಗೆ ಹೆಮ್ಮೆ, ಪ್ರೋತ್ಸಾಹ ಹೆಚ್ಚಿಸಿದೆ.

### ವಿಶೇಷ ಕಾರ್ಯಕ್ರಮ ಆಯೋಜನೆ

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ಕೆಸಿಡಿ ಮೈದಾನದಲ್ಲಿ 200 ವಿದ್ಯಾರ್ಥಿಗಳು ಸೇರಿ, ಭಾರತ ರಾಷ್ಟ್ರಧ್ವಜ ಬಣ್ಣದ ಕ್ಯಾಪ್ ಧರಿಸಿ, ನಕ್ಷೆ ರೂಪಿಸಿದ್ದರು. 1 ಕೀ.ಮಿ ಉದ್ದದ ಕೆಂಪು ಮತ್ತು ಹಳದಿ ಬಣ್ಣದ ಧ್ವಜ ಪ್ರದರ್ಶಿಸಿದ್ದರು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಕುಂಭಮೇಳ ಆಯೋಜಿಸಲಾಗಿತ್ತು. ವಿದ್ಯಾರ್ಥಿಗಳು ಸ್ವಾತಂತ್ರ್ಯ ಹೋರಾಟಗಾರರ ವೇಷಭೂಷಣ ಧರಿಸಿ ಭಾಗವಹಿಸಿದ್ದರು. ಮಂಗಳಮುಖಿಯರು ಮಾನವ ಸರಪಳಿ ಕಾರ್ಯಕ್ರಮದಲ್ಲಿ ಯಶಸ್ವಿಯಾಗಿ ಭಾಗವಹಿಸಿದ್ದರು.

# ಕೂಲಿ ಕಾರ್ಮಿಕನನ್ನು ತಿವಿದ ಗೂಳಿ

**■ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಇಲ್ಲಿಯ ಟರ್ನಲ್ ಪೇಟೆ, ರಾಮದೇವರ ಗುಡಿ ಹತ್ತಿರ ಸ್ಥಳೀಯ ನಿವಾಸಿ ಪ್ರಕಾಶ ಎಸ್. ಗಂಜಿ ಇವರ ಮೇಲೆ ಬೀದಿ ಗೂಳಿ ದಾಳಿ ಮಾಡಿರುವ ಘಟನೆ ಜರುಗಿದೆ. ಬಡ ಕುಟುಂಬದ ಕೂಲಿ ಕಾರ್ಮಿಕನಾಗಿರುವ ಇವರು ಕೆಲಸ ಮುಗಿಸಿ ಸಾಯಂಕಾಲ 5ರ ಸುಮಾರಿಗೆ ಮರಳಿ ಮನೆಗೆ ಹೋಗುವ ಸಂದರ್ಭದಲ್ಲಿ ಗೂಳಿ ಗಾಯಗೊಳಿಸಿದೆ.

ದಿನನಿತ್ಯ ಮಕ್ಕಳು, ವಯಸ್ಸಾದ ವೃದ್ಧರು, ಸಾರ್ವಜನಿಕರು ಓಡಾಡುವ ಈ ರಸ್ತೆಯಲ್ಲಿ ಬೀದಿ ಗೂಳಿಗಳ ಹಾವಳಿ ಬಹಳಷ್ಟಿದ್ದು, ದಿನನಿತ್ಯ ಸಾರ್ವಜನಿಕರಿಗೆ ಒಂದಿಲ್ಲೊಂದು ರೀತಿಯಿಂದ ತೊಂದರೆಯಾಗುತ್ತಲೇ ಇದೆ. ಕೂಡಲೇ ಸಂಬಂಧಪಟ್ಟವರು ಕ್ರಮ ಜರುಗಿಸಲು ಸ್ಥಳೀಯರಾದ ಶ್ರೀಕಾಂತ ರಾಯಬಾಗಿ, ನವೀನ ಹತ್ತಿಕಾಳ ಹಾಗೂ ಇನ್ನಿತರು ಆಗ್ರಹಿಸಿದ್ದಾರೆ.

# ಯುವನಿಧಿ ಯೋಜನೆ: ಅಭ್ಯರ್ಥಿಗಳ ಗಮನಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ 05 ಗ್ಯಾರಂಟಿ ಯೋಜನೆಗಳಲ್ಲಿ 05ನೇ ಗ್ಯಾರಂಟಿ ಯೋಜನೆ ಯವನಿಧಿ ಈ ಯೋಜನೆಯಲ್ಲಿ ಪದವಿ ಮತ್ತು ಡಿಪ್ಲೋಮಾ ಕೋರ್ಸ್ ವ್ಯಾಸಂಗ ಮಾಡಿ ಜನವರಿ 2023 ರ ನಂತರ ತೇರ್ಗಡೆಯಾಗಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಸೇವಾ ಸಿಂಧು ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಳ್ಳಬಹುದಾಗಿದೆ.

ಫಲಿತಾಂಶದ ನಂತರ ನಿರುದ್ಯೋಗಿಯಾಗಿ 180 ದಿನಗಳನ್ನು ಪೂರೈಸಿದ ಅರ್ಹ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗಿರುತ್ತದೆ, ಅಭ್ಯರ್ಥಿಗಳು ಈ ಪ್ರಯೋಜನ ಪ್ರತಿ ತಿಂಗಳು ಪಡೆಯಲು, ತಾನು ನಿರುದ್ಯೋಗಿಯೆಂದು, ವ್ಯಾಸಂಗ ಮುಂದುವರೆಸುತ್ತಿಲ್ಲವೆಂದು ಹಾಗೂ ಸ್ವಯಂ ಉದ್ಯೋಗಿಯಾಗಿಲ್ಲವೆಂದು ಸ್ವಯಂ ಘೋಷಣೆಯನ್ನು ಪ್ರತಿ ತಿಂಗಳ 25ನೇ ತಾರೀಖಿನೊಳಗೆ ಮಾಡಬೇಕು.

ಸೇವಾ ಸಿಂದು ಪೋರ್ಟಲ್ ಲಾಗಿನ್‌ನಲ್ಲಿ ಅರ್ಜಿ ಸ್ಥಿತಿಯನ್ನು ಪರಿಶೀಲಿಸಿ ದಾಖಲೆ ಪರಿಶೀಲನೆ ಬಾಕಿ ಉಳಿದಿರುವ ಅಭ್ಯರ್ಥಿಗಳು ಎಲ್ಲ ಮೂಲ ದಾಖಲೆಗಳೊಂದಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಗೆ ಖುದ್ದಾಗಿ ಸಂಪರ್ಕಿಸಿ ತಮ್ಮ ದಾಖಲೆಗಳನ್ನು ಪರಿಶೀಲಿಸಿ ದೃಢೀಕರಿಸಿಕೊಳ್ಳಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08372-220609. ಸಂಪರ್ಕಿಸಬಹುದಾಗಿದೆ.

## ಕುಮಾರವ್ಯಾಸರ ಹೆಸರಿನಲ್ಲಿ 'ಶಾಶ್ವತ ಚಿತ್ರಾತ್ಮಕ ಮುದ್ರೆ' ವಿಶೇಷ ಮುದ್ರೆಯ ಲೋಕಾರ್ಪಣೆ

# ವಿಶೇಷ ಮುದ್ರೆಯಿಂದ ಸಾಧಕರ ಪರಿಚಯ

**■ವಿಜಯಸಾಕ್ಷಿ ಸುದ್ದಿ, ಗದಗ**

ದೇಶದ ಮಹಾನ್ ವ್ಯಕ್ತಿ ಮತ್ತು ಸಂಸ್ಥೆ ಪರಿಚಯಿಸಲು 'ಶಾಶ್ವತ ಚಿತ್ರಾತ್ಮಕ ಮುದ್ರೆ' ವಿಶೇಷ ಮುದ್ರೆಯನ್ನು ಬಿಡುಗಡೆ ಮಾಡುವುದರಿಂದ ಸಾಧ್ಯವಾಗಲಿದೆ ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ಜಯದೇವ ಕಡಗಿ ಅಭಿಪ್ರಾಯಪಟ್ಟರು.

ಭಾರತೀಯ ಅಂಚೆ ಇಲಾಖೆಯು ಗದುಗಿನ ಶ್ರೀ ವೀರನಾರಯಣ ದೇವಾಲಯದಲ್ಲಿ ಮಂಗಳವಾರ ಕರ್ನಾಟಕ ಸಂಭ್ರಮ-50 ಮಹೋತ್ಸವ ಹಿನ್ನೆಲೆಯಲ್ಲಿ ಕುಮಾರವ್ಯಾಸ ಹೆಸರಿನಲ್ಲಿ 'ಶಾಶ್ವತ ಚಿತ್ರಾತ್ಮಕ ಮುದ್ರೆ' ವಿಶೇಷ ಮುದ್ರೆಯ ಲೋಕಾರ್ಪಣೆ ನೆರವೇರಿಸಿ ಅವರು ಮಾತನಾಡಿದರು.

ವೀರನಾರಾಯಣ ದೇವಸ್ಥಾನ ಕಮಿಟಿ ಅಧ್ಯಕ್ಷ ಡಾ. ಕುಶಾಲ ಗೋಡ್ಕಂಡಿ ಮಾತನಾಡಿ, ಕರ್ನಾಟಕ ಕಥಾ ಮಂಜರಿಯನ್ನು ಕುಮಾರವ್ಯಾಸರು ಗದುಗಿನ ವೀರನಾರಾಯಣ ಸನ್ನಿಧಿಯಲ್ಲಿ ರಚಿಸಿರುವ ಮತ್ತು ನಮ್ಮ ನಾಡಿಗೆ 'ಕರ್ನಾಟಕ' ಎಂದು ನಾಮಕರಣ ಮಾಡಲು ಮೂಲ ಪ್ರೇರಣೆ ನೀಡಿದ ಕುಮಾರವ್ಯಾಸರಿಗೆ ಶ್ರೇಯಸ್ಸು ಸಲ್ಲುತ್ತದೆ. ಕುಮಾರವ್ಯಾಸರ ಗಮಕ ಸಾಹಿತ್ಯದ ಕೊಡುಗೆ ನಮಗೆ ಹೆಮ್ಮೆಯ ವಿಷಯವಾಗಿತ್ತು. ಇದೀಗ ಈ ಸಾಲಿಗೆ




ಕುಮಾರವ್ಯಾಸರ 'ಶಾಶ್ವತ ಚಿತ್ರಾತ್ಮಕ ಮುದ್ರೆ' ವಿಶೇಷ ಮುದ್ರೆಯ ಲೋಕಾರ್ಪಣೆ ನಾಡಿನ ಜನರಿಗೆ ಸಂತಸ ತಂದಿದೆ ಎಂದರು.

ನಾಡಿನ ಎಲ್ಲೆಡೆ ಪ್ರಖ್ಯಾತಿ ಪಡೆದುಕೊಂಡಿರುವ ಗದುಗಿನ ವೀರನಾರಾಯಣ ಮತ್ತು ಕುಮಾರವ್ಯಾಸರ ಕೀರ್ತಿ ಬೆಳೆಯಲು ಪ್ರಮುಖ ಅಂಶಗಳನ್ನು ಈ ಮುದ್ರೆ ಹೊಂದಿದೆ. ಇಂತಹ ಅಂಚೆಚೀಟಿ ಅಂತಾರಾಷ್ಟ್ರೀಯ ಮಟ್ಟದ ಪ್ರಚಾರ ದೊರಕಲು ಸಹಕಾರಿಯಾಗಿದೆ ಎಂದರು.

ಅಂಚೆ ಚೀಟಿ ಸಂಗ್ರಹಕಾರರಾದ ಎ.ಬೇಲೇರಿ, ಶ್ರೀನಿವಾಸ ದ್ವಾರಪಾಲಕ ಮಾತನಾಡಿದರು.

ಅಂಚೆ ಚೀಟಿ ಸಂಗ್ರಹಕರರಾದ ಸಯಂ ಬಾಗಮಾರ ಹಾಗೂ ಗದಗ ವಿಭಾಗದ ಸಹಾಯಕ ಅಂಚೆ ಅಧೀಕ್ಷಕರಾದ ಶ್ರೀಕಾಂತ ಜಾದವ, ಸುನೀಲಕುಮಾರ ವಿ, ರೋಣ ಉಪ ವಿಭಾಗದ ಅಂಚೆ ಸಹಾಯಕ ನಿರೀಕ್ಷಕ ವೆಂಕಟೇಶರಡ್ಡಿ ಕೊಳ್ಳಿ, ಪ್ರಧಾನ ಅಂಚೆ ಪಾಲಕರಾದ ಮಂಜುಳಾ ದೇಗಿನಾಳ, ಉಪ ಅಂಚೆ ಪಾಲಕ ದೊಡ್ಡಪ್ಪ ಇಟಗಿ, ಸಹಾಯಕ ಅಂಚೆ ಪಾಲಕ ಡಿ.ಜಿ. ವ್ಯಾಗೇರಿ ಹಾಗೂ ಅಂಚೆ ಇಲಾಖೆ ವಾರುಕಟ್ಟೆ ವ್ಯವಸ್ಥಾಪಕರಾದ ವೆಂಕಟೇಶ ಆಕಳವಾಡಿ, ಬಸವರಾಜ ಶೇಡದ, ಅನಿತಾ ಪಿ.ಕುರಿ, ಮೇಘನಾ ಕುಲಕರ್ಣಿ, ಶ್ರೀಕಾಂತ್ ತೆರ್ದಾಳ್, ಅರುಣಕುಮಾರ ಗಂಗಾವತಿ, ಸಿದ್ಧಲಿಂಗೇಶ ಯಂಡಿಗೇರಿ, ಉಮೇಶ ಸಂದಿಮನಿ, ಅಮರೇಶ ರಾಠೋಡ, ಸರೋಜಾ ಪಟ್ಟಣಶೆಟ್ಟರ, ವಿದ್ಯಾ ಗದಗ, ವಾಣಿ ಮಾಂಡ್ರೆ, ಬಸವರಾಜ ಮೊರಬದ, ರಾಘವೇಂದ್ರ ಕಮ್ಮಾರ, ಶಿವಣ್ಣ ಸುಳ್ಳದ ಮತ್ತಿತರು ಸಿಬ್ಬಂದಿ ಪಾಲ್ಗೊಂಡಿದ್ದರು. ನಿಂಗಪ್ಪ ಹೂಗಾರ ನಿರೂಪಿಸಿ, ವಂದಿಸಿದರು.

ವಿಶೇಷ ವ್ಯಕ್ತಿ ಮತ್ತು ವಿಶೇಷ ಸಂದರ್ಭದಲ್ಲಿ ಇಂತಹ ಶಾಶ್ವತ ಚಿತ್ರಾತ್ಮಕ ಮುದ್ರೆಗಳು ಲೋಕಾರ್ಪಣೆಯಾಗಲಿವೆ. ನಾಡಿನ ಪ್ರಖ್ಯಾತ ಪ್ರವಾಸಿ ತಾಣ ಪರಿಚಯಿಸಲು ಮತ್ತು ಗ್ರಾಹಕರಿಗೆ ತಮ್ಮ ನೆಚ್ಚಿನ ಚಿತ್ರ ಕಳುಹಿಸಲು ಉಪಯೋಗಿಸಬಹುದಾಗಿದೆ. ಇಂತಹ ಮಹತ್ವದ ಶಾಶ್ವತ ಚಿತ್ರಾತ್ಮಕ ಮುದ್ರೆಗಳು ದೇಶದ ಎಲ್ಲೆಡೆ ನಮ್ಮ ನಾಡಿನ ಹೆಮ್ಮೆಯ ಸಾಧಕರ, ಐತಿಹಾಸಿಕ ಮಹತ್ವ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರಚಾರ, ಪ್ರಸಿದ್ಧಿ ಪ್ರಚುರಪಡಿಸಲು ಅಂಚೆ ಇಲಾಖೆಯ ಮುದ್ರೆಗಳು ಅತ್ಯಂತ ಸಹಕಾರಿಯಾಗಿದೆ ಎಂದು ಜಯದೇವ ಕಡಗಿ ನುಡಿದರು.

# ಸಂವಿಧಾನವೇ ಭಾರತದ ಆಧಾರ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಡಾ. ಬಿ.ಆರ್. ಅಂಬೆಡ್ಕರ್ ರಚಿಸಿದ ಸಂವಿಧಾನವೇ ಭಾರತದ ಆಧಾರ ಸ್ತಂಭವಾಗಿದೆ ಎಂದು ರಮೇಶ ಮ್ಯಾಗೇರಿ ಹೇಳಿದರು.

ಅವರು ಇಲ್ಲಿನ ಪಟ್ಟಣ ಪಂಚಾಯಿತಿ ಸಭಾ ಭವನದಲ್ಲಿ 75ನೇ ಸಂವಿಧಾನ ದಿನಾಚರಣೆ ಅಂಗವಾಗಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ಡಾ. ಬಿ.ಆರ್. ಅಂಬೇಡ್ಕರ್ ಎಲ್ಲಾ ಜಾತಿ-ಜನಾಂಗ, ಧರ್ಮದವರಿಗೂ ಸಾಮಾಜಿಕ, ಆರ್ಥಿಕ, ರಾಜಕೀಯ ನ್ಯಾಯ ನೀಡಬೇಕು ಎಂಬ ಪರಿಕಲ್ಪನೆಯಿಂದ ಶ್ರೇಷ್ಠವಾದ ಸಂವಿದಾನ ರಚಿಸಿದ್ದಾರೆ. ಸಂವಿಧಾನ ರಚನೆಯಿಂದ ದೇಶದ ಎಲ್ಲರಿಗೂ ಸಮಾನತೆ ಸಿಕ್ಕಿದೆ. ನಮ್ಮ ಸಂವಿಧಾನ ಪ್ರಪಂಚದಲ್ಲೇ ಶ್ರೇಷ್ಠ ಸಂವಿಧಾನವಾಗಿದೆ ಎಂದರು.

ಪ.ಪಂ ಅಧ್ಯಕ್ಷೆ ಯಲ್ಲವ್ವ ಕವಲೂರ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷೆ ಅನುಸೂಯಾ ಸೋಮಗೇರಿ, ಪ.ಪಂ ಮುಖ್ಯಾಧಿಕಾರಿ ಮಂಜುನಾಥ ಗುಳೇದ, ಪ.ಪಂ ಸದಸ್ಯ ನಾಗರಾಜ ದೇಶಪಾಂಡೆ, ವಿಜಯ ನೀಲಗುಂದ, ಬಸವರಾಜ ಹಾರೋಗೇರಿ, ಮಾಹಾದೇವಪ್ಪ ಗಡಾದ, ದಾವುದ ಜಮಾಲ, ಅಶೋಕ ಸೋನಗೋಜಿ, ಪರಶುರಾಮ ದೊಡ್ಡಮನಿ, ಉಮಾ ಮಟ್ಟಿ, ಲಕ್ಷ್ಮವ್ವ ಕುಂದಗೋಳ, ಪಾರವ್ವ ಅಳ್ಳಣ್ಣವರ, ವಾಣೀಶ್ರೀ ನಿರಂಜನ ಸೇರಿದಂತೆ ಪ.ಪಂ ಸಿಬ್ಬಂದಿ ಹಾಗೂ ಪೌರಕಾರ್ಮಿಕರು ಇದ್ದರು.


## ಗ್ರಾಮ ಪಂಚಾಯತ ಕಾರ್ಯಾಲಯ ಸೂರಣಗಿ,

ತಾಲೂಕ :-ಲಕ್ಷ್ಮೇಶ್ವರ ಜಿಲ್ಲಾ:-ಗದಗ

email: suranagi.shi.gdg@gmail.com

ಸಂ.ಗ್ರಾ.ಪಂ.ಸೂ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25 ದಿನಾಂಕ:-26.11.2024

### ದರಪಟ್ಟಿ ಪ್ರಕಟಣೆ

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಸೂರಣಗಿ ಇವರು 2024-25 ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರ್ಮ ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ. ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರ್ಮ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ಸೂರಣಗಿ ಗ್ರಾಮದ ಸರಕಾರಿ ಕಿ ಪ್ರಾ ಜನತಾ ಪ್ಲಾಟ್ ಶಾಲೆ ಕಬಡ್ಡಿ, ವಾಲಿಬಾಲ ಮೈದಾನ ನಿರ್ಮಾಣ ಮಾಡುವುದು 1514005021 /AV/ 93393042892338319 | 1,03,000=00 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 2 | ಸೂರಣಗಿ ಗ್ರಾಮದ ಸರಕಾರಿ ಹಿ ಪ್ರಾ ಗಂ/ಹೆ ಮಕ್ಕಳ ಶಾಲೆ ಶೌಚಾಲಯ ನಿರ್ಮಾಣ ಮಾಡುವುದು ಭಾಗ-1 1514005021/RS/93393042892 306047 | 1,34,600=00 | 500 | |
| 3 | ಸೂರಣಗಿ ಗ್ರಾಮದ ಸ ಕಿ ಪ್ರಾ ಹೆಣ್ಣು ಮಕ್ಕಳ ಶಾಲೆಯಲ್ಲಿ ಶೌಚಾಲಯ ನಿರ್ಮಾಣ ಭಾಗ-11514005021/RS/93393042892306041 | 1,38,651=00 | 500 | |
| 4 | 1514005021/FP/93393042892 327500 ಸೂರಣಗಿ ಗ್ರಾಮದ ಶಿಗ್ಲಿ ಮುಖ್ಯ ರಸ್ತೆಯಿಂದ ಕೊರವರ ಮಂಜುನಾಥ ಇವರ ಮನೆ ಹತ್ತಿರ ಸಿ.ಡಿ ನಿರ್ಮಾಣ | 110920=00 | 500 | |
| 5 | 1514005021/FP/93393042892 328418 ಸೂರಣಗಿ ಗ್ರಾಮದ ನಾಗಪ್ಪನ ಕಟ್ಟೆ ಹತ್ತಿರ ಇರುವ ಚರಂಡಿ ಮೇಲೆ ಸ್ಲಾಬ್ ನಿರ್ಮಾಣ | 60534=00 | 500 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರ್ಮಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ:- **26.11.2024 ರಿಂದ 06.12.2024** ರವರೆಗೆ

ಖಾಲಿ ದರಪಟ್ಟಿ ಫಾರ್ಮ ನೀಡುವ ದಿನಾಂಕ:- **07.12.2024,** ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ:- **07.12.2024 ಮುಂಜಾನೆ 10.00** ಗಂಟೆಯಿಂದ **ಮಧ್ಯಾಹ್ನ 2.30** ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ:- **07.12.2024 ರ ಮಧ್ಯಾಹ್ನ 3.30** ಗಂಟೆ.

**ನಿಬಂಧನೆಗಳು:**

**(1)** ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಕಾರ್ಯಾಲಯ ಸೂರಣಗಿಯಿಂದ ಮಾಹಿತಿ ಪಡೆಯಬಹುದಾಗಿದೆ.

**ಸಹಿ/- ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತಿ ಸೂರಣಗಿ**

**ಸಹಿ/- ಅಧ್ಯಕ್ಷರು ಗ್ರಾಮ ಪಂಚಾಯತಿ ಸೂರಣಗಿ**

ವಾ.ಸಾ.ಇ/ಗದಗ/410/ದೇಶಪಾಂಡೆಪಬ್ಲಿಸಿಟಿ/2024-25


## ಸರ್ವಧರ್ಮ ಸಮನ್ವಯ ಪೀಠ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ದಿಂಗಾಲೇಶ್ವರ ಶ್ರೀಗಳು

# ಶ್ರೀಮಠ ಸರ್ವಧರ್ಮದವರ ಆಸ್ತಿಯಾಗಲಿ

**■ವಿಜಯಸಾಕ್ಷಿ ಸುದ್ದಿ, ರೋಣ**

ಸೌಹಾರ್ದತೆ, ಸಹೋದರತೆ, ಏಕತೆ ಇವುಗಳು ನಮ್ಮ ದೇಶದ ಪ್ರತೀಕವಾಗಿದ್ದು, ಹಿಂದು, ಮುಸ್ಲಿಂ, ಕ್ರೈಸ್ತರೆಲ್ಲರೂ ಒಂದಾಗಿ ಸಹಬಾಳ್ವೆ ನಡೆಸಬೇಕು ಎಂದು ಬಾಲೆಹೊಸುರ ಹಾಗೂ ಶಿರಹಟ್ಟಿ ಫಕೀರೇಶ್ವರ ಶ್ರೀಮಠ ಪೂಜ್ಯರಾದ ದಿಂಗಾಲೇಶ್ವರ ಶ್ರೀಗಳು ಹೇಳಿದರು.

ಅವರು ಮಾರನಬಸರಿ ಗ್ರಾಮದಲ್ಲಿ ಸೋಮವಾರ ಜರುಗಿದ ಸರ್ವಧರ್ಮ ಸಮನ್ವಯ ಪೀಠ ಲೋಕಾರ್ಪಣೆ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಕಾಣದ ಕೈಗಳು ಇಂದಿನ ಸಮಾಜದಲ್ಲಿ ಜಾತಿ-ಧರ್ಮಗಳ ವಿಷ ಬೀಜಗಳನ್ನು ಬಿತ್ತಿ ನಾಗರಿಕ ಸಮಾಜವನ್ನು ಒಡೆಯುತ್ತಿವೆ. ಇದನ್ನು ಸಮಾಜ ಅರ್ಥ ಮಾಡಿಕೊಳ್ಳಬೇಕು. ಹಿಂದು, ಮುಸ್ಲಿಂ, ಕ್ರೈಸ್ತರೆಲ್ಲರೂ ಒಂದಾಗುವ ಮೂಲಕ ಇಂತವುಗಳನ್ನು ಎದುರಿಸಿ ಭಾವೈಕ್ಯತೆಯನ್ನು ಬೆಸೆಯಬೇಕು. ಅಂದಾಗ ಮಾತ್ರ ಸಮಾನತೆಯ ನಾಡನ್ನು ಕಟ್ಟಲು ಸಾಧ್ಯ ಎಂದರು.

ಮಠಗಳು ಕಡಿಮೆಯಾಗುತ್ತಿರುವ ಈ



ಸಂಧರ್ಭಗಳಲ್ಲಿ ಸರ್ವಧರ್ಮದವರು ಕೂಡಿಕೊಂಡು ಮಠ ಸ್ಥಾಪನೆ ಮಾಡಿದ್ದು ಅಭಿನಂದನಾರ್ಹ. ಶ್ರೀಮಠ ಸರ್ವಧರ್ಮದವರ ಆಸ್ತಿಯಾಗಿ ಬೆಳೆಯಲಿ ಎಂದ ಶ್ರೀಗಳು, ಶ್ರೀಮಠದಲ್ಲಿ ಧಾರ್ಮಿಕ ಕಾರ್ಯಗಳ ಜೊತೆ-ಗೆ ಸಮಾಜಮುಖಿ ಕಾರ್ಯಗಳು ಸಹ ನಡೆಯಬೇಕು. ಮುಖ್ಯವಾಗಿ ಸರ್ವಧರ್ಮ ಸಮನ್ವಯ ಪೀಠವಾಗಿ ಉಳಿದು ಎಲ್ಲ ಭಕ್ತರಿಗೂ ಧಾರ್ಮಿಕತೆಯನ್ನು ಭೋದಿಸಬೇಕು ಎಂದು ಆಶೀರ್ವದಿಸಿದರು.

ಇದೇ ಸಂಧರ್ಭದಲ್ಲಿ ಭೂ ಧಾನಿಗಳಿಗೆ ಹಾಗೂ ಸೇವೆಗೈದ ಮಹನೀಯರುಗಳಿಗೆ ಸತ್ಕರಿಸಲಾಯಿತು.

ಹಿರೇಮಾಗಡಿ ಹಾಗೂ ಸರ್ವಧರ್ಮ ಸಮನ್ವಯ ಪೀಠದ ಶಿವಮೂರ್ತಿ ಶ್ರೀಗಳು, ಶಾಖಾ ಶಿವಯೋಗ ಮಂದಿರದ ಚನ್ನಬಸವ ಶ್ರೀಗಳು, ಶಿದ್ದನಕೊಳ್ಳದ ಡಾ. ಶಿವಕುಮಾರ ಶ್ರೀಗಳು, ಶಿವಯೋಗಿ ದೇವರು ಸಾನ್ನಿಧ್ಯ ವಹಿಸಿದ್ದರು. ವೇ.ಮೂ. ವಿಶ್ವನಾಥ ಪಂಡಿತ ವೈದ್ಯ ಸಮ್ಮುಖ ವಹಿಸಿದ್ದರು. ಅಧ್ಯಕ್ಷತೆಯನ್ನು ಶಾಸಕ ಜಿ.ಎಸ್. ಪಾಟೀಲ ವಹಿಸಿದ್ದರು.

ಶರಣಪ್ಪ ಕುರಿ, ಅಂದಪ್ಪ ಮರಡಿ, ಶೇಖರಗೌಡ ಪಾಟೀಲ, ಶಂಕ್ರಗೌಡ ಪಾಟೀಲ, ವಿ.ಬಿ. ಸೋಮನಕಟ್ಟಿಮಠ, ಪಿಡಿಒ ಎಸ್.ಆರ್. ಸಂಕನೂರ, ಶರಣಪ್ಪ ಮ್ಯಾಗೇರಿ, ಸಂಜೀವ ಬಿಜಾಪೂರ, ಸುರೇಶ ಪಲ್ಲೇದ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು. ಶಿವಕುಮಾರ ದಿಂಡೂರ ಸ್ವಾಗತಿಸಿದರು. ಎಸ್.ಬಿ. ಪೂಜಾರ ನಿರೂಪಿಸಿದರು, ಭರತ ಹಾದಿಮನಿ ವಂದಿಸಿದರು.

ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ಭಾವೈಕ್ಯತೆಗೆ ಹೆಸರಾದ ಮಾರನಬಸರಿ ಗ್ರಾಮ ನನ್ನ ಕ್ಷೇತ್ರದಲ್ಲಿರುವುದು ನನಗೆ ಅತ್ಯಂತ ಹೆಮ್ಮೆ. ಇಲ್ಲಿನ ಜನರು ಎಲ್ಲ ಹಬ್ಬಗಳನ್ನು ಒಟ್ಟಾಗಿ ಆಚರಣೆ ಮಾಡುತ್ತಾ ಬಂದಿದ್ದಾರೆ. ಮುಖ್ಯವಾಗಿ ಪುರಾಣ, ಪ್ರವಚನ ಕಾರ್ಯಗಳನ್ನು ಸಹ ಸೇರಿಕೊಂಡು ನಡೆಸುವುದು ಅಭಿನಂದನಾರ್ಹ. ಮುಂದಿನ ದಿನಗಳಲ್ಲಿ ಶ್ರೀಮಠಕ್ಕೆ ನೆರವು ನೀಡಲಾಗುವುದು ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka